# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 22 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 03–08–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 02 Issue - 22 | Title- Code: KARKAN 28269 | Chitradurga | Date: 03-08-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಜನ ಜಾಗೃತರಾಗಿ ಡೆಂಗ್ಯೂ ನಿಯಂತ್ರಣಕ್ಕೆ ಸಹಕರಿಸಿ 2

ವಾರದಲ್ಲಿ ವೇದಾವತಿ ಸ್ಪರ್ಷಿಸಲಿರುವ ಎತ್ತಿನಹೊಳೆ ನೀರು:ಶಾಸಕ ಗೋವಿಂದಪ್ಪ 3

ಜಾಗತಿಕ ಕುಟುಂಬ ದಿನ–ಏಕತೆ ಮತ್ತು ಸಕಾರಾತ್ಮಕತೆಯ ಬೆಳಕು 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಸರ್ಕಾರದ ಕ್ರಾಂತಿಕಾರಿ ಯೋಜನೆಯಿಂದ ರಾಜ್ಯದ ಯುವಕರಿಗೆ ಅನುಕೂಲ– ಎಂ.ಕನಗವಲ್ಲಿ

# ಯುವಜನರಿಗೆ ವಿದೇಶದಲ್ಲಿ ಉದ್ಯೋಗ

» ಚಿತ್ರದುರ್ಗ

ಸರ್ಕಾರದ ಕ್ರಾಂತಿಕಾರಿ ಯೋಜನೆಯಿಂದಾಗಿ ರಾಜ್ಯದ ಬಡ ಯುವಕರು ಯೂರೋಪ್, ಹಂಗೇರಿ ಸೇರಿದಂತೆ ವಿವಿಧ ದೇಶಗಳಲ್ಲಿ ಉದ್ಯೋಗ ಪಡೆದುಕೊಂಡಿದ್ದು, ಕೌಶಲ್ಯಾಭಿವೃದ್ಧಿ ಸಚಿವರಾದ ಡಾ. ಶರಣಪ್ರಕಾಶ್ ಪಾಟೀಲ್ ಅವರದೂರದೃಷ್ಟಿಹಾಗೂಅವರಸಮುಚಿತ ಮಾರ್ಗದರ್ಶನದಲ್ಲಿ ಈ ಯೋಜನೆ ಉತ್ತಮವಾಗಿ ಅನುಷ್ಠಾನಗೊಳ್ಳುತ್ತಿದೆ ಎಂದು ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಹಾಗೂ ಗ್ರಂಥಾಲಯ ಇಲಾಖೆ ಆಯುಕ್ತರಾಗಿರುವ ಎಂ.ಕನಗವಲ್ಲಿ ಅವರು ಹೇಳಿದರು.

ಚಿತ್ರದುರ್ಗದ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ಕಚೇರಿ ಹಾಗೂ ನಗರದ ಕೇಂದ್ರ ಗ್ರಂಥಾಲಯಕ್ಕೆ ಶುಕ್ರವಾರದಂದು ಭೇಟಿ ನೀಡಿ ಪರಿಶೀಲನೆ ನಡೆಸಿ ಬಳಿಕ ಅವರು ಮಾಹಿತಿ ನೀಡಿದರು.

ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮವು ರಾಜ್ಯದ ಯುವಕರಿಗೆ ವಿದೇಶಗಳಲ್ಲಿ ಉದ್ಯೋಗ ಒದಗಿಸುವ ಮಹತ್ವದ ಯೋಜನೆ ಅನುಷ್ಠಾನಗೊಳಿಸುತ್ತಿದೆ, ಕೇವಲ ಕಳೆದೆರಡು ತಿಂಗಳಿನಲ್ಲಿಯೇ ರಾಜ್ಯದ ಸುಮಾರು 150 ಕ್ಕೂ ಹೆಚ್ಚು ಯುವಜನರು ಸ್ಲೋವಾಕಿಯಾ, ಹಂಗೇರಿ ಮುಂತಾದ ದೇಶಗಳಿಗೆ ವಿವಿಧ ಉದ್ಯೋಗಕ್ಕೆ ಆಯ್ಕೆಯಾಗಿ ತೆರಳಿದ್ದು, ಅವರು ವಿದೇಶಕ್ಕೆ ತೆರಳಲು ನಿಗಮದ ವತಿಯಿಂದಲೇ ಅವರಿಗೆ ಎಲ್ಲ ವ್ಯವಸ್ಥೆ ಮಾಡಿಕೊಡಲಾಗಿದೆ ಎಂದರು.

ಐಟಿಐ,ಡಿಪ್ಲೋಮಾಮುಂತಾದವೃತ್ತಿಪರ ಕೋರ್ಸ್‍ಗಳನ್ನು ವ್ಯಾಸಂಗ ಮಾಡಿರುವ ಯುವಕರು, ಇಲ್ಲಿ ಉದ್ಯೋಗಕ್ಕಾಗಿ ಹರಸಾಹಸ ಪಡುವಂತಹ ಸಂದರ್ಭದಲ್ಲಿ ರಾಜ್ಯದ ಕೌಶಲ್ಯಾಭಿವೃದ್ಧಿ ಸಚಿವರಾದ ಡಾ. ಶರಣಪ್ರಕಾಶ್ ಪಾಟೀಲ್ ಅವರ ದೂರದೃಷ್ಟಿ ಮತ್ತು ಉತ್ತಮ ಮಾರ್ಗದರ್ಶನದಂತೆ, ಈ ಯುವಕರಿಗೆ ವಿದೇಶದಲ್ಲಿ ಕೈತುಂಬಾ ಸಂಬಳ ಪಡೆದು, ತಮ್ಮ ಭವಿಷ್ಯ ರೂಪಿಸಿಕೊಳ್ಳುವಂತಾಗಲು ನಿಗಮವು ಈ ಯೋಜನೆ ಅನುಷ್ಠಾನಗೊಳಿಸುತ್ತಿದೆ ಎಂದು ತಿಳಿಸಿದರು.



ಈವರೆಗೆ ಸುಮಾರು ಒಂದು ಸಾವಿರಕ್ಕೂ ಹೆಚ್ಚು ಯುವಜನರನ್ನು ನಾನಾ ದೇಶಗಳಿಗೆ ಉದ್ಯೋಗಕ್ಕಾಗಿ ಕಳುಹಿಸಿಕೊಡಲಾಗಿದೆ. ಯುವಜನರ ವೃತ್ತಿಪರ ಕೋರ್ಸ್‍ಗೆ ಅನುಗುಣವಾಗಿ ವಿದೇಶದಲ್ಲಿ ನೌಕರಿ ಗಿಟ್ಟಿಸಿಕೊಳ್ಳಲು ಅನುಕೂಲವಾಗುವಂತೆ ಅವರಿಗೆ ಸ್ಥಳೀಯವಾಗಿ ಉತ್ತಮ ಕೌಶಲ್ಯ ತರಬೇತಿ ನೀಡಲಾಗುತ್ತಿದೆ. ವಿವಿಧ ದೇಶಗಳ ಜೊತೆ ಒಡಂಬಡಿಕೆ ಮಾಡಿಕೊಂಡು, ಅಂತಹ ಅಭ್ಯರ್ಥಿಗಳಿಗೆ ಬಿಡದಿಯ ಟೊಯೋಟಾ, ಕಿರ್ಲೋಸ್ಕರ್ ನಲ್ಲಿ ತರಬೇತಿಯನ್ನು ಕೊಡಿಸಿ, ಪ್ರತಿ ಅಭ್ಯರ್ಥಿಗೆ ತರಬೇತಿಗಾಗಿ ವೆಚ್ಚವಾಗುತ್ತಿದ್ದ ಸುಮಾರು 35 ಸಾವಿರ ರೂ. ಗಳನ್ನು ನಿಗಮದಿಂದಲೇ ವೆಚ್ಚ ಭರಿಸಲಾಗಿದೆ ಎಂದರು.ಸ್ಲೋವಾಕಿಯಾ ದೇಶದಲ್ಲಿ ಐಟಿಐ, ಡಿಪ್ಲೋಮಾ ಉತ್ತೀರ್ಣರಾದ ಯುವಜನರಿಗೆ ನೇಮಕಾತಿ ನಡೆದು, ಕಳೆದ ಜೂ. 05 ರಿಂದ ಈವರೆಗೆ ವಿವಿಧ ತಂಡಗಳಲ್ಲಿ ಉದ್ಯೋಗಕ್ಕಾಗಿ ಕಳುಹಿಸಿಕೊಡಲಾಗಿದೆ. ಇವರಿಗೆ ತಿಂಗಳಿಗೆ 970 ಯೂರೋ ಅಂದರೆ ಸುಮಾರು 86 ಸಾವಿರ ರೂಪಾಯಿ ವೇತನ ನೀಡಲಾಗುತ್ತಿದೆ. ಇದೇ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯಿಂದ ಆಟೋಮೊಬೈಲ್ ಡಿಪ್ಲೋಮಾ ಓದಿದ್ದ ಮೆಹ್ತಾಬ್ ಎಸ್ ಹೆಬ್ಬಳ್ಳಿ ಎಂಬ ಅಭ್ಯರ್ಥಿ ಈಗಾಗಲೆ ಉದ್ಯೋಗ ಪಡೆದು, ಸ್ಲೋವಾಕಿಯಾ ದೇಶಕ್ಕೆ ತೆರಳಿದ್ದಾನೆ ಎಂದು ತಿಳಿಸಿದರು.

ಇತ್ತೀಚೆಗಷ್ಟೇ ಸುಮಾರು 37 ಚಾಲಕರನ್ನು ಉದ್ಯೋಗಕ್ಕಾಗಿ ಹಂಗೇರಿಗೆ ಕಳುಹಿಸಿಕೊಡಲಾಗಿದೆ. ಅಭ್ಯರ್ಥಿಗಳಿಗೆ ತರಬೇತಿ, ವೀಸಾ ವ್ಯವಸ್ಥೆ, ವಿವಿಧ ದಾಖಲಾತಿಗಳ ಪ್ರಮಾಣಪತ್ರ ಪರಿಶೀಲನೆ ಮುಂತಾದ ಕಾರ್ಯಗಳಿಗೆ ನಿಗಮವೇ ಒತ್ತಾಸೆಯಾಗಿ ನಿಂತಿದೆ. ಮುಂದಿನ ದಿನಗಳಲ್ಲಿ ಆಸ್ಟ್ರೇಲಿಯಾ, ಜಪಾನ್, ಫಿನ್ಲ್ಯಾಂಡ್,ಜರ್ಮನಿಮುಂತಾದದೇಶಗಳಿಗೆ ಉದ್ಯೋಗಾವಕಾಶ ಕಲ್ಪಿಸಿಕೊಡಲು ನಿಗಮವು ಯೋಜಿಸಿದೆ, ಈ ನಿಟ್ಟಿನಲ್ಲಿ ಈಗಾಗಲೆ ಕಾರ್ಯಪ್ರವೃತ್ತವಾಗಿದೆ ಎಂದು ಎಂ. ಕನಗವಲ್ಲಿ ಅವರು ಹೇಳಿದರು.

ಚಿತ್ರದುರ್ಗದನಗರಕೇಂದ್ರಗ್ರಂಥಾಲಯಕ್ಕೆ ಭೇಟಿ ನೀಡಿ, ಗ್ರಂಥಾಲಯದ ವಿವಿಧ ವಿಭಾಗಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಸಾರ್ವಜನಿಕ ಗ್ರಂಥಾಲಯಗಳಲ್ಲಿ ಓದುಗರಿಗೆ ಉತ್ತಮ ವಾತಾವರಣ ನಿರ್ಮಿಸಬೇಕು, ಓದುಗರ ಸೆಳೆಯಲು ಉತ್ತಮ ವಾತಾವರಣ, ಸೇವೆ ನೀಡಬೇಕು. ಓದುಗರಿಗೆ ಸರಿಯಾದ ಆಸನ, ನೀರು, ಉತ್ತಮ ಗಾಳಿ, ಬೆಳಕು, ಶೌಚಾಲಯ ವ್ಯವಸ್ಥೆ ಸೇರಿದಂತೆ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು, ಓದುಗರ ಆಸಕ್ತಿಗನುಗುಣವಾಗಿ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅನುಕೂಲವಾಗುವಂತೆ ಪುಸ್ತಕಗಳನ್ನು ತರಿಸಿ, ಗ್ರಂಥಾಲಯದಲ್ಲಿ ಲಭ್ಯವಾಗುವಂತೆ ಮಾಡಬೇಕು ಎಂದು ತಿಳಿಸಿದರು.ನಗರದ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯ ಸಭಾಂಗಣ, ಸ್ಪರ್ಧಾತ್ಮಕವಿಭಾಗ,ದಿನಪತ್ರಿಕೆವಿಭಾಗಗಳಿಗೆ ಭೇಟಿ ನೀಡಿ ಓದುಗರೊಂದಿಗೆ ಸಂವಾದ ನಡೆಸಿ, ಗ್ರಂಥಾಲಯದ ಸೌಲಭ್ಯಗಳ ಕುರಿತು ಮಾಹಿತಿ ಪಡೆದುಕೊಂಡರು. ನಂತರ ಚಿತ್ರದುರ್ಗ ನಗರದ ಕೆಹೆಚ್‍ಬಿ ಕಾಲೋನಿಯ ಗ್ರಂಥಾಲಯದ ಕಟ್ಟಡದ ನಿವೇಶನಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಇದಕ್ಕೂ ಮುನ್ನ ತಾಲ್ಲೂಕಿನ ಕೆ. ಬಳ್ಳೇಕಟ್ಟೆ ಬಳಿಯ ಬಿದರೆಕೆರೆ ಹತ್ತಿರ ಕೌಶಲ್ಯಾಭಿವೃದ್ಧಿ ಇಲಾಖೆಗೆ ಸೇರಿದ 45.13 ಎಕರೆ ವಿಸ್ತೀರ್ಣದ ಭೂಮಿಗೆ 1.98 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಕಾಂಪೌಂಡ್ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕೌಶಲ್ಯಾಭಿವೃದ್ಧಿ ಇಲಾಖೆಯ ಜಿಲ್ಲಾ ಅಧಿಕಾರಿ ಟಿ. ವೇಮಣ್ಣ, ಜಿಲ್ಲಾ ಕೇಂದ್ರ ಗ್ರಂಥಾಲಯ ಮುಖ್ಯಗ್ರಂಥಾಲಯಾಧಿಕಾರಿ ಸುಮಾ ಕೋಡಿಹಳ್ಳಿ, ನಗರ ಕೇಂದ್ರ ಗ್ರಂಥಾಲಯಾಧಿಕಾರಿ ಕೊಳ್ಳಿ ಬಸವರಾಜ್, ದಾವಣಗೆರೆ ಜಿಲ್ಲಾ ಉಪನಿರ್ದೇಕ ಪಿ.ಆರ್. ತಿಪ್ಪೇಸ್ವಾಮಿ ಸೇರಿದಂತೆ ಗ್ರಂಥಾಲಯ ಸಿಬ್ಬಂದಿ ಇದ್ದರು.

## ಫಾಸ್ಟ್ ನ್ಯೂಸ್

### ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಜಿಲ್ಲೆಯಲ್ಲಿ ಆತ್ಮ ಯೋಜನೆಯ ಜಿಲ್ಲಾ ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿ (ರೈತರು ಹಾಗೂ ರೈತ ಮಹಿಳೆಯರು) ಹಾಗೂ ತಾಲ್ಲೂಕು ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿ (ರೈತರು ಹಾಗೂ ರೈತ ಮಹಿಳೆಯರು) ಪ್ರಶಸ್ತಿಗಳ ಆಯ್ಕೆಗೆ ಅರ್ಜಿ ಆಹ್ವಾನಿಸಲಾಗಿದ್ದು, ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನ. ಜಮೀನು ಹೊಂದಿರುವ, ಆಸಕ್ತ ಕೃಷಿ ಮತ್ತು ಕೃಷಿ ಸಂಬಂಧಿತ ಕ್ಷೇತ್ರಗಳಲ್ಲಿ ತೊಡಗಿಸಿಕೊಂಡಿರುವ ರೈತರು ಹಾಗೂ ರೈತ ಮಹಿಳೆಯರು ಇದರ ಸದುಪಯೋಗ ಪಡೆದುಕೊಳ್ಳುವುದು, ಹೆಚ್ಚಿನ ವಿವರಗಳಿಗೆ ಮತ್ತು ಅರ್ಜಿಗಾಗಿ ಸಂಬಂದಪಟ್ಟ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಲು ಕೋರಿದೆ. ಈ ಹಿಂದೆ ಜಿಲ್ಲಾ ಮಟ್ಟದ ಶ್ರೇಷ್ಠ ಕೃಷಿಕ ಪ್ರಶಸ್ತಿ ಪಡೆದವರು ಸ್ಪರ್ಧಿಸುವಂತಿಲ್ಲ. ಕೇಂದ್ರ, ರಾಜ್ಯ ಸರ್ಕಾರಿ ಸೇವೆಯಲ್ಲಿರಬಾರದು. ವಿಶ್ವವಿದ್ಯಾಲಯ, ಸರ್ಕಾರಿ ಸ್ವಯಂ ಸಂಸ್ಥೆಗಳ ನೌಕರರು ಮತ್ತು ಅವರ ಕುಟುಂಬದ ಸದಸ್ಯರು ಸ್ಪರ್ದೆಯಲ್ಲಿ ಭಾಗವಹಿಸುವಂತಿಲ್ಲ. ಕೃಷಿ ಮತ್ತು ಸಂಬಂಧಿತ ಇಲಾಖೆಗಳ ನಿವೃತ್ತ ತಾಂತ್ರಿಕ ನೌಕರರು ಮತ್ತು ಕುಟುಂಬದವರು ಭಾಗವಹಿಸುವಂತಿಲ್ಲ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

### ಬೇಸಾಯ ತಾಂತ್ರಿಕತೆಗಳು ಕುರಿತು ತರಬೇತಿ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಆಗಸ್ಟ್ 06ರಂದು ಬೆಳಿಗ್ಗೆ 10ಕ್ಕೆ ಜಿಲ್ಲೆಯ ರೈತರಿಗೆ ಈರುಳ್ಳಿ, ಟೊಮಾಟೋ, ಮೆಣಸಿನಕಾಯಿ ಮತ್ತು ಬದನೆಕಾಯಿ ಬೆಳೆಗಳ ಸುಧಾರಿತ ಬೇಸಾಯ ತಾಂತ್ರಿಕತೆಗಳ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಹಿರಿಯೂರು ತೋಟಗಾರಿಕೆ ಮಹಾವಿದ್ಯಾಲಯ ತೋಟಗಾರಿಕೆ ತಜ್ಞರಾದ ಡಾ. ಪ್ರಕಾಶ್ ಕೆರೂರ್ ಮತ್ತು ಡಾ. ಶ್ರುತಿ ಅವರು ಈರುಳ್ಳಿ, ಟೊಮಾಟೋ, ಮೆಣಸಿನಕಾಯಿ ಮತ್ತು ಬದನೆಕಾಯಿ ಬೆಳೆಗಳಲ್ಲಿ ಅನುಸರಿಸಬೇಕಾದ ಬೇಸಾಯ ಕ್ರಮಗಳು ಹಾಗೂ ಕೆವಿಕೆ ಬಬ್ಬೂರು ಕೀಟಶಾಸ್ತ್ರಜ್ಞ ಟಿ.ರುದ್ರಮುನಿ ಅವರು ಈ ಬೆಳೆಗಳಲ್ಲಿ ಬರುವ ಪ್ರಮುಖ ಕೀಟ ಮತ್ತು ರೋಗಗಳ ನಿರ್ವಹಣೆ ಕುರಿತು ವಿಷಯ ಮಂಡನೆ ಮಾಡುವರು. ಆಸಕ್ತ 50 ಜನರೈತಭಾಂದವರು ಈ ತರಬೇತಿಯಲ್ಲಿ ಭಾಗವಹಿಸಲು ಆರ್. ರಜನೀಕಾಂತ, ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಬಬ್ಬೂರು ಫಾರಂ (8277931058), ಸಿಕಂದರ್ ಬಾಷಾ, ಕೃಷಿ ಅಧಿಕಾರಿ (9845249832) ಮತ್ತು ಪವಿತ್ರಾ ಎಂ. ಜೆ. (9535412286) ಅವರ ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಲು ಕೋರಿದೆ. ಮೊದಲು ನೋಂದಾವಣಿ ಮಾಡಿಕೊಂಡ 50 ಜನ ರೈತಭಾಂದವರಿಗೆ ಆದ್ಯತೆ ಮೇರೆಗೆ ತರಬೇತಿಗೆ ಪರಿಗಣಿಸಲಾಗುವುದು ಹಾಗೂ ತರಬೇತಿಗೆ ಹಾಜರಾಗುವ ರೈತಬಾಂಧವರು ಕಡ್ಡಾಯವಾಗಿ ತಮ್ಮ ಎಫ್‍ಐಡಿಕಾರ್ಡ್ ಅಥವಾ ಚುನಾವಣೆ ಗುರುತಿನ ಚೀಟಿ ತರಬೇಕು ಎಂದು ಪ್ರಕಟಣೆ ತಿಳಿಸಿದೆ.

### ಸಾಮಾನ್ಯ ಸಭೆ

» ದಾವಣಗೆರೆ

ಜಿಲ್ಲಾ ಸಹಕಾರ ಒಕ್ಕೂಟದ ಸಾಮಾನ್ಯ ಸಭೆಯನ್ನು ಒಕ್ಕೂಟದ ಅಧ್ಯಕ್ಷರಾದ ಶ್ರೀ ಸಿರಿಗೆರೆ ರಾಜಣ್ಣರವರ ಅಧ್ಯಕ್ಷತೆಯಲ್ಲಿ ಆಗಸ್ಟ್ 12 ರಂದು ಮಧ್ಯಾಹ್ನ 12 ಗಂಟೆಗೆ ದಾವಣಗೆರೆ ನಗರದ ಶ್ರೀ ಷ॥ ಬ್ರ॥ ಡಾ॥ ಸದ್ಯೋಜಾತ ಶಿವಾಚಾರ್ಯ ಮಹಾಸ್ವಾಮೀಜಿ ಟ್ರಸ್ಟ್, ಶಿವಾಚಾರ್ಯ ನಿಕೇತನ ಹಿರೇಮಠ, ಎಂ.ಸಿ.ಸಿ 'ಬಿ' ಬ್ಲಾಕ್, ಶಾಮನೂರು ರಸ್ತೆ, ಇಲ್ಲಿ ಕರೆಯಲಾಗಿದೆ.

## ಸ್ವಾತಂತ್ರ್ಯೋತ್ಸವ ದಿನಾಚರಣೆ: ಎಲ್ಲರೂ ಭಾಗವಹಿಸಿ

» ಚಳ್ಳಕೆರೆ

77ನೇ ಸ್ವಾತಂತ್ರ್ಯೋತ್ಸವವನ್ನು ಸಡಗರ, ಸಂಭ್ರಮದಿಂದ ಎಲ್ಲರೂ ಸೇರಿ ಆಚರಿಸೋಣ. ದೇಶದ ಹಬ್ಬ ಮನೆ, ಮನೆಯ ಹಬ್ಬವಾಗಿ ಪ್ರತಿಯೊಬ್ಬರೂ ಭಾಗವಹಿಸಿ ಯಶಸ್ವಿ ಮಾಡಿ ಎಂದು ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷ, ತಹಶೀಲ್ದಾರ್ ರೇಹಾನ್‍ಪಾಷ ಮನವಿ ಮಾಡಿದರು.

ಅವರು, ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ 77ನೇ ಸ್ವಾತಂತ್ರ್ಯೋತ್ಸವ ಪೂರ್ವಬಾವಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು. ದೇಶದ ಸ್ವಾತಂತ್ರ್ಯಕ್ಕೆ ಹೋರಾಟ ಮಾಡಿದ ಹೋರಾಟಗಾರರು, ಪೌರಕಾರ್ಮಿಕರು, ದೇಶ ಸೇವೆ ಮಾಡಿದವರಿಗೆ ಸನ್ಮಾನಿಸುವ ಕೆಲಸವನ್ನು ಮಾಡಬೇಕಿದೆ.

ಪುಟ ↘ 2



## ರೈಲ್ವೆ ಯೋಜನೆಗಳಿಗೆ ವೇಗ ನೀಡಿ: ಸಂಸದ ಕಾರಜೋಳ ಮನವಿ

ಚಿತ್ರದುರ್ಗ: ಲೋಕಸಭಾ ಕ್ಷೇತ್ರದ ರೈಲ್ವೆ ಯೋಜನೆಗಳಿಗೆ ವೇಗ ನೀಡಿ ಕಾಲಮಿತಿ ಯೊಳಗೆ ಪೂರ್ಣಗೊಳಿಸು ವಂತೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಅವರನ್ನು ಸಂಸದ ಗೋವಿಂದ ಕಾರಜೋಳ ಭೇಟಿ ಮಾಡಿ ಮನವಿ ಮಾಡಿದರು.ಚಿತ್ರದುರ್ಗ ಐತಿಹಾಸಿಕ ಹಿನ್ನೆಲೆಯುಳ್ಳ ತಾಣವಾಗಿರುವುದರ ಜೊತೆಗೆ ಮೈಸೂರು ರೈಲ್ವೆ ವಲಯದಲ್ಲಿಯೇ ಅತಿ ಹೆಚ್ಚು ಆದಾಯವನ್ನು ಕಬ್ಬಿಣದ ಅದಿರು ಹಾಗೂ ಮ್ಯಾಂಗನೀಸ್ ಅದಿರನ್ನು ಸಾಗಾಟ ಮಾಡುವ ಮೂಲಕ ರೈಲ್ವೆ ಇಲಾಖೆಗೆ ಚಿತ್ರದುರ್ಗ ಜಿಲ್ಲೆ ತಂದುಕೊಡುತ್ತಿದೆ.



ಪುಟ ↘ 3

## ಪ್ರಮುಖ ಸುದ್ದಿ

# ಮಕ್ಕಳಿಗೆ ಶಿಕ್ಷಣದ ಜೊತೆ ಮೂಲಭೂತ ಸೌಲಭ್ಯ ಅಗತ್ಯ

» ನಮ್ಮಜನ ಸಮಾಚಾರ

ನಾಯಕನಹಟ್ಟಿ: ಬಡತನ ಮೀರಿದ ಬದುಕು ಕಟ್ಟಿಕೊಳ್ಳಲು ಉತ್ತಮ ಶಿಕ್ಷಣ ನೀಡಿ ಎಂದು ನಿಕಟ ಪೂರ್ವ ತಹಶೀಲ್ದಾರ್ ಎನ್. ರಘುಮೂರ್ತಿ ಹೇಳಿದರು.

ಶುಕ್ರವಾರ ಪಟ್ಟಣದ ಹೊರವಲಯದಲ್ಲಿ ಡಾನ್ ಬಾಸ್ಕೋ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಉಚಿತ ಶುದ್ಧ ನೀರಿನ ಉಪಕರಣಗಳನ್ನು ನೀಡಿದ ಪ್ರಯುಕ್ತ ಅಭಿನಂದನೆ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದರು.

ಮಕ್ಕಳಿಗೆ ಶಿಕ್ಷಣದ ಜೊತೆಯಲಿ ಶಿಸ್ತು ಮತ್ತು ಸಂಸ್ಕಾರವನ್ನು ಕಲಿಸಿ ಗ್ರಾಮೀಣ ಪ್ರದೇಶದ ಬಡ ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಯಲ್ಲಿ ಉತ್ತಮ ಸಂಸ್ಕಾರ ಕಲಿಸಬೇಕು ಎಂದರು.

ವಿದ್ಯಾರ್ಥಿಗಳಿಗೆ ಆಹಾರದ ಜೊತೆ ಉತ್ತಮ ಕುಡಿಯುವ ನೀರು ಸಹ ಅಗತ್ಯವಾಗಿ ಬೇಕು. ಅನೇಕ ಕಾಯಿಲೆಳಿಂದ ಮುಕ್ತವಾಗಿರಲು ಶುದ್ದ ಕುಡಿಯುವ ಅಗತ್ಯ ಎಂದು ತಿಳಿಸಿದರು.



ಶ್ರೀ ಹಟ್ಟಿ ಮಲ್ಲಪ್ಪ ನಾಯಕ ಸಂಘದ ಅಧ್ಯಕ್ಷ ಪಟೇಲ್ ಜಿ.ಎಂ. ತಿಪ್ಪೇಸ್ವಾಮಿ ಎತ್ತಿನಹಟ್ಟಿ ಗೌಡ್ರು ಮಾತನಾಡಿ ನಿಕಟ ಪೂರ್ವ ತಹಶೀಲ್ದಾರ್ ರಘುಮೂರ್ತಿ ಸಾಮಾಜಿಕ ಕಳಕಳಿ ಉಳ್ಳವಂತಹ ವ್ಯಕ್ತಿ ಆಗಿದ್ದಾರೆ.

ಶಿಕ್ಷಣಕ್ಕೆ ಹೆಚ್ಚಿನ ಮಹತ್ವವನ್ನು ನೀಡುವ ಮೂಲಕ ಈ ಹಿಂದೆ ಚಳ್ಳಕೆರೆ ತಹಶೀಲ್ದಾರ್ ಆಗಿ ಉತ್ತಮ ಕೆಲಸ ಮಾಡಿದ್ದರು. ತಾಲೂಕಿನ ಗ್ರಾಮೀಣ ಪ್ರದೇಶದ ಜನರಿಗೆ ಸ್ಪಂದಿಸುವ ಮೂಲಕ ಸಮಸ್ಯೆ ಮುಕ್ತ ಗ್ರಾಮ ಮಹಾಮಾರಿ ಕರೋನಾ ಕೋವಿಡ್ ಸಂದರ್ಭದಲ್ಲಿ ಉತ್ತಮವಾಗಿ ಕೆಲಸ ಮಾಡಿದ್ದಾರೆ.

ಗ್ರಾಮೀಣ ಪ್ರದೇಶದ ಬಡ ಮಕ್ಕಳಿಗೆ ಸ್ಪರ್ಧಾತ್ಮಕ ಕೋರ್ಸ್ ಗಳಿಗೆ ಸುಮಾರು ಒಂದು ಸಾವಿರ ಬಡ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ತರಬೇತಿ ಕೊಡಿಸಿದ್ದರು. ವಿದ್ಯಾರ್ಥಿಗಳಿಗೆ ಅನುಕೂಲವನ್ನು ಕಲ್ಪಿಸಿದ್ದಾರೆ. ಈ ದಿನ ಡಾನ್ ಬಾಸ್ಕೋ ಶಾಲೆಗೆ ಉಚಿತವಾಗಿ ಶುದ್ಧ ನೀರಿನ ಉಪಕರಣವನ್ನು ನೀಡಿರುವುದು ಶ್ಲಾಘನೀಯ ಎಂದರು.

ಡಾನ್ ಬಾಸ್ಕೋ ಆಂಗ್ಲ ಮಾಧ್ಯಮ ಶಾಲಾ ಸಂಸ್ಥೆಯಿಂದ ನಿಕಟ ಪೂರ್ವ ತಹಶೀಲ್ದಾರ್ ಎನ್ ರಘುಮೂರ್ತಿ ರವರಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಹೋಬಳಿ ನೀರಾವರಿ ಸಾಮಾಜಿಕ ಹೋರಾಟ ಸಮಿತಿ ಅಧ್ಯಕ್ಷ ಜಿ.ಬಿ.ಮುದಿಯಪ್ಪ, ಗಜ್ಜುಗಾನಹಳ್ಳಿ ಜಿ ಎಸ್. ತಿಪ್ಪೇಸ್ವಾಮಿ, ಡಾನ್ ಬಾಸ್ಕೋ ಆಂಗ್ಲ ಮಾಧ್ಯಮ ಶಾಲೆಯ ಕಾರ್ಯದರ್ಶಿ ಎಸ್. ಟಿ.ಬೋರಸ್ವಾಮಿ, ಆಡಳಿತ ಅಧಿಕಾರಿ ಎಚ್ .ಎನ್.ಉಮಾ, ಮುಖ್ಯ ಶಿಕ್ಷಕ ಟಿ. ಪಾಲಯ್ಯ ಮತ್ತು ಶಿಕ್ಷಕರು ಇದ್ದರು.

# ಫಾಸ್ಟ್ ನ್ಯೂಸ್

## ಆಗಸ್ಟ್ 4 ರಂದು ಅಂತರ್ ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ

» **ಹೊಸದುರ್ಗ**

ರಾಜ್ಯ ಶ್ರೀ ವೀರ ಮಡಿವಾಳ ಮಾಚಿದೇವ ಯುವ ಸೇನಾಪಡೆ ವತಿಯಿಂದ ಆಗಸ್ಟ್ 4 ರಂದು ಭಾನುವಾರ ಪಟ್ಟಣದ ಟಿ.ಬಿ. ಸರ್ಕಲ್ ಬಳಿ ಇರುವ ಕನ್ನಡ ಭವನದಲ್ಲಿ ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ಮತ್ತು ದಾವಣಗೆರೆ ಅಂತರ್ ಜಿಲ್ಲಾ ಮಟ್ಟದ 2023-24 ನೇ ಸಾಲಿನ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಯಲ್ಲಿ ಶೇ. 85 ಕ್ಕೂ ಹೆಚ್ಚು ಅಂಕ ಪಡೆದು ತೇರ್ಗಡೆ ಹೊಂದಿರುವ ಮಡಿವಾಳ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನ ಆಯೋಜಿಸಲಾಗಿದೆ ಎಂದು ಸೇನಾ ಪಡೆಯ ಕಾರ್ಯಾಧ್ಯಕ್ಷ ನಾಗತಿಹಳ್ಳಿಮಂಜುನಾಥ್ ತಿಳಿಸಿದ್ದಾರೆ.ಶುಕ್ರವಾರ ಪಟ್ಟಣದ ಸಂಘದ ಕಛೇರಿಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ಹಿರಿಯ ಪತ್ರಕರ್ತ ಹಾಗೂ ತಾಲೂಕು ಶ್ರೀ ವೀರ ಮಡಿವಾಳ ಮಾಚಿದೇವ ಸಂಘದ ಮಾಜಿ ಕಾರ್ಯದರ್ಶಿ ಎನ್.ಕೆ.ತಿಪ್ಪೇಸ್ವಾಮಿ ಕಾರ್ಯಕ್ರಮವನ್ನ ಉದ್ಘಾಟಿಸಲಿದ್ದು ಸೇನಾ ಪಡೆಯ ಅಧ್ಯಕ್ಷ ಮೀರಸಾಬಿಹಳ್ಳಿಶಿವಣ್ಣ ಅಧ್ಯಕ್ಷತೆ ವಹಿಸಿಲಿದ್ದಾರೆ. ರಾಜ್ಯ ಗುಪ್ತವಾರ್ತೆ ವಿಭಾಗದ ನಿವೃತ್ತ ಪೋಲೀಸ್ ಅಧಿಕಾರಿ ದಾವಣಗೆರೆಯ ಮಹಂತೇಶ್ ಟಿ, ಪ್ರತಿಭಾ ಪುರಸ್ಕಾರ ನಡೆಸಿಕೊಡಲಿದ್ದು ತಾಲೂಕು ಶ್ರೀ ವೀರ ಮಡಿವಾಳ ಮಾಚಿದೇವ ಸಂಘದ ಅಧ್ಯಕ್ಷ ಬಿ.ಆರ್.ರಾಮಕೃಷ್ಣ ದತ್ತಿ ನಿಧಿ ಉದ್ಘಾಟನೆ ಮಾಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ನಿವೃತ್ತ ಹಿರಿಯ ಪಶುವೈಧ್ಯ ಪರೀಕ್ಷಕರಾದ ಎಂ.ಹೆಚ್. ತಿಪ್ಪೇಸ್ವಾಮಿ (ದೇವರಮರಿಕುಂಟೆ) ಚಿತ್ರದುರ್ಗ ಶ್ರೀರಾಮ ಹೌಸಿಂಗ್ ಫೈನಾನ್ಸ್ ಶಾಖಾ ವ್ಯವಸ್ಥಾಪಕ ಎಸ್.ಲಕ್ಷ್ಮೀಸಾಗರ್, ತಾಲೂಕು ಕ.ಸಾ.ಪ ಅಧ್ಯಕ್ಷ ಬಿ.ಪಿ.ಓಂಕಾರಪ್ಪ, ಚಿತ್ರದುರ್ಗ ಚೋಳ ಫೈನಾನ್ಸ್ ಶಾಖಾ ವ್ಯವಸ್ಥಾಪಕ ಪ್ರತಾಪ್ ಎಂ ಸೇರಿದಂತೆ ಮತ್ತಿತರರು ಭಾಗವಹಿಸಲಿದ್ದು ಇದೇ ಕಾರ್ಯಕ್ರಮದಲ್ಲೆ ಪಟ್ಟಣದ ತಾಲೂಕು ಕಛೇರಿಯ ನಿವೃತ್ತ ಶಿರಸ್ತೆಧಾರರು ಹಾಗೂ ಸಮಾಜದ ಹಿರಿಯರೂ ಆದ ಆರ್.ಜಯಣ್ಣ ಇವರನ್ನ ಸನ್ಮಾನಿಸಿ ಗೌರವಿಸಲಾಗುವುದು ಎಂದರು.

## ಸ್ವಾತಂತ್ರ್ಯೋತ್ಸವ ದಿನಾಚರಣೆ: ಎಲ್ಲರೂ ಭಾಗವಹಿಸಿ

» **ಮೊದಲ ಪುಟದಿಂದ**

ಈ ಬಾರಿ ಮಕ್ಕಳಿಂದ ವಿಶೇಷ ಮನೋರಂಜನಾ ಕಾರ್ಯಕ್ರಮಗಳನ್ನು ಆಯೋಜಿಸಿ, ಮಕ್ಕಳಲ್ಲಿ ಸ್ವಾತಂತ್ರ್ಯದ ಬಗ್ಗೆ ಕೆಚ್ಚೆದೆ ಉಂಟಾಗುವಂತಹ ಕೆಲಸ ನಾವೆಲ್ಲರೂ ಮಾಡೋಣವೆಂದರು. ರಾಷ್ಟ್ರದ ಸ್ವಾತಂತ್ರ್ಯೋತ್ಸವ ನಮ್ಮೆಲ್ಲರಿಗೂ ಹಬ್ಬವಾಗಿದೆ. ಬ್ರಿಟಿಷರ ದಾಸ್ಯದಿಂದ ನಾವೆಲ್ಲರೂ ಮುಕ್ತಿ ಪಡೆದ ದಿನವಾಗಿದೆ. ದೇಶದ ಸ್ವಾತಂತ್ರ್ಯಕ್ಕಾಗಿ ಮಹಾತ್ಮಗಾಂಧಿಯೂ ಸೇರಿದಂತೆ ಅನೇಕ ಮಹಾನೀಯರು ತಮ್ಮದೇಯಾದ ಕೊಡುಗೆಯನ್ನು ನೀಡಿದ್ಧಾರೆ. ಸ್ವಾತಂತ್ರ್ಯೋತ್ಸವ ದಿನಾಚರಣೆಯಲ್ಲಿ ಎಲ್ಲರೂ ಪಾಲ್ಗೊಳ್ಳಬೇಕಿದೆ. ಕಾರ್ಯಕ್ರಮ ರೂಪುರೇಷೆಗಳ ಬಗ್ಗೆ ಶೀಘ್ರದಲ್ಲೇ ಎಲ್ಲರಿಗೂ ಮಾಹಿತಿ ನೀಡಲಾಗುವುದು. ಅಂದು ನಡೆಯುವ ಕಾರ್ಯಕ್ರಮಕ್ಕೆ ಎಲ್ಲಾ ಅಧಿಕಾರಿಗಳು ತಪ್ಪದೆ ಹಾಜರಿರಬೇಕೆಂದು ಮನವಿ ಮಾಡಿದರು.

ಪೂರ್ವಬಾವಿ ಸಭೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಪಶುವೈದ್ಯಾಧಿಕಾರಿ ಡಾ.ರೇವಣ್ಣ, ಕೃಷಿ ಅಧಿಕಾರಿ ಜೆ.ಅಶೋಕ್, ಪೌರಾಯುಕ್ತ ಎಚ್.ಜಿ.ಜಗರೆಡ್ಡಿ, ಕಾರ್ಮಿಕ ಅಧಿಕಾರಿ ಕುಸುಮ, ಅರಣ್ಯ ಅಧಿಕಾರಿ ವಸಂತಕುಮಾರ್, ಪಿಎಸ್ಐ ಜೆ.ಶಿವರಾಜ್, ಆರೋಗ್ಯ ನಿರೀಕ್ಷರಾದ ಗಣೇಶ್, ಸುನಿಲ್, ಎಸ್.ಬಿ.ತಿಪ್ಪೇಸ್ವಾಮಿ, ನಾಮನಿರ್ದೇಶನ ಸದಸ್ಯರಾದ ಅನ್ವರ್‌ಮಾಸ್ಟರ್, ನೇತಾಜಿಪ್ರಸನ್ನ, ರಾಜಣ್ಣ, ಕಂದಾಯಾಧಿಕಾರಿ ಲಿಂಗೇಗೌಡ, ತಿಪ್ಪೇಸ್ವಾಮಿ, ಗ್ರಾಮಲೆಕ್ಕಿಗ ಪ್ರಕಾಶ್, ಡಿ.ಶ್ರೀನಿವಾಸ್, ಮುಂತಾದವರು ಸಭೆಯಲ್ಲಿ ಭಾಗವಹಿಸಿದ್ದರು.

## ಸುಪ್ರೀಂ ತೀರ್ಪಿನಿಂದ ಜಯ ಸಿಕ್ಕಂತಾಗಿದೆ


» **ಚಿತ್ರದುರ್ಗ**

ಒಳ ಮೀಸಲಾತಿಗಾಗಿ ಕಳೆದ ಮೂವತ್ತು ನಲವತ್ತು ವರ್ಷಗಳಿಂದಲೂ ಮಾದಿಗರು ನಡೆಸುತ್ತಿರುವ ಹೋರಾಟಕ್ಕೆ ಸುಪ್ರೀಂಕೋರ್ಟ್ ನೀಡಿರುವ ಮಹತ್ವದ ತೀರ್ಪಿನಿಂದ ಜಯ ಸಿಕ್ಕಂತಾಗಿದೆ ಎಂದು ಮಾದಿಗ ಮಹಾಸಭಾ ಜಿಲ್ಲಾಧ್ಯಕ್ಷ, ಚಳ್ಳಕೆರೆ ನಗರಸಭೆ ಮಾಜಿ ಸದಸ್ಯ ಎಂ.ಶಿವಮೂರ್ತಿ ಅತೀವ ಹರ್ಷ ವ್ಯಕ್ತಪಡಿಸಿದ್ದಾರೆ.ಕರ್ನಾಟಕ,ಆಂಧ್ರ,ತಮಿಳುನಾಡು, ಪಂಜಾಬ್ ಸೇರಿದಂತೆ ಅನೇಕ ರಾಜ್ಯಗಳಲ್ಲಿ ಒಳ ಮೀಸಲಾತಿಗಾಗಿ ನಡೆಸಿದ ಹೋರಾಟದ ಫಲವಾಗಿ ಸುಪ್ರೀಂಕೋರ್ಟ್ ಐತಿಹಾಸಿಕ ತೀರ್ಪು ನೀಡಿದೆ. ರಾಜ್ಯದ ಮುಖ್ಯಮಂತ್ರಿಗಳಾಗಿದ್ದ ಬಿ.ಎಸ್. ಯಡಿಯೂರಪ್ಪ, ಬಸವರಾಜ್ ಬೊಮ್ಮಾಯಿ ಇವರುಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳಲ್ಲಿನ ಶೋಷಿತರಿಗೆ ಒಳ ಮೀಸಲಾತಿ ಸಿಗಬೇಕೆಂದು ಕೇಂದ್ರಕ್ಕೆ ವರದಿ ಸಲ್ಲಿಸಿದ್ದರು. ಇದಕ್ಕಾಗಿ ಮಾಧುಸ್ವಾಮಿ ಅಧ್ಯಕ್ಷತೆಯಲ್ಲಿ ಗೋವಿಂದ ಕಾರಜೋಳ, ಕೆ.ಸುಧಾಕರ್ ಸೇರಿದಂತೆ ನಾಲ್ವರ ಕಮಿಟಿಯನ್ನು ರಚಿಸಲಾಗಿತ್ತು. ಮಾಜಿ ಸಂಸದ ಎ.ನಾರಾಯಣಸ್ವಾಮಿ ಕೂಡ ಒಳ ಮೀಸಲಾತಿ ಪರವಾಗಿದ್ದರು. ಆಂಧ್ರದಲ್ಲಿ ನಡೆದ ಮಾದಿಗರ ದೊಡ್ಡ ಸಮ್ಮೇಳನದಲ್ಲಿ ಪ್ರಧಾನಿ ಮೋದಿರವರು ಭಾಗವಹಿಸಿ ಎಸ್ಸಿ.ಎಸ್ಟಿ.ಗೆ ಒಳಮೀಸಲಾತಿಯನ್ನು ಜಾರಿಗೊಳಿಸುತ್ತೇನೆಂದು ಮಂದಕೃಷ್ಣ ಮಾದಿಗ ಇವರಿಗೆ ಭರವಸೆ ನೀಡಿದ್ದರು.

# ಈಚಘಟ್ಟದಿಂದ ಅನುಭಾವ ಶ್ರಾವಣ ಆರಂಭ

» **ಹೊಳಲ್ಕೆರೆ**

ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದವತಿಯಿಂದಪ್ರತಿವರ್ಷಶ್ರಾವಣ ಮಾಸದಲ್ಲಿ ವಿಶೇಷ ಕಾರ್ಯಕ್ರಮವನ್ನು 2024 ಅಗಸ್ಟ್ 5 ರಂದು ಶ್ರಾವಣ ಮಾಸದ ಆರಂಭದ ಮೊದಲ ದಿನವಾದ ಸೋಮವಾರ ತಾಲೂಕಿನ ಈಚಘಟ್ಟ ಗ್ರಾಮದಲ್ಲಿ ಚಾಲನೆ ನೀಡಲಾಗುತ್ತಿದೆ ಎಂದು ಶ್ರೀಮಠದ ಆಡಳಿತ ಮಂಡಳಿ ಸದಸ್ಯರಾದ ಡಾ.ಬಸವಕುಮಾರ ಮಹಾಸ್ವಾಮಿ ತಿಳಿಸಿದರು.



ಅವರು ತಾಲೂಕಿನ ಈಚಘಟ್ಟದಲ್ಲಿ ಶುಕ್ರವಾರ ಸಾರ್ವಜನಿಕರ ಸಭೆ ನಡೆಸಿ ಮಾತನಾಡಿ, "ಅನುಭಾವ ಶ್ರಾವಣ " ಎನ್ನುವ ವಿಶೇಷ ಸರಣಿ ಚಿಂತನ ಮಾಲೆಯು ಈಚಘಟ್ಟ ಗ್ರಾಮದಿಂದ ಆರಂಭವಾಗಲಿದ್ದು,ಕಾರ್ಯಕ್ರಮದದಿನದ ಬೆಳಗ್ಗೆ 10:30 ಗಂಟೆಯಿಂದ ಚಿತ್ರದುರ್ಗದ ಬಸವೇಶ್ವರ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ತಜ್ಞವೈದ್ಯರುಗಳಿಂದ ಗ್ರಾಮದಲ್ಲಿ "ಉಚಿತ ಆರೋಗ್ಯ ತಪಾಸಣಾ" ಶಿಬಿರ ಏರ್ಪಡಿಸುತ್ತೇವೆ ಎಂದರು.

ಸಂಜೆ 5-30 ಗಂಟೆಯಿಂದ ಗ್ರಾಮದ ಕೆಲ ಕಡೆ ಸಸಿ ನೆಡುವ ಕಾರ್ಯಕ್ರಮ, ಸಂಜೆ 6 ಗಂಟೆ ಸಭಾ ಕಾರ್ಯಕ್ರಮ ಇರಲಿದೆ. ಅಂದು "ಅಥಣಿಯ ಮುರುಘೇಂದ್ರ ಶಿವಯೋಗಿ"ಗಳವರ ವಿಷಯ ಕುರಿತು ಶಿವಾನುಭವ ಗೋಷ್ಠಿ ನಡೆಯಲಿದೆ. ಅನುಭಾವ ಶ್ರಾವಣದ ಸಾನಿಧ್ಯವನ್ನು ರಾವಂದೂರು ಮುರುಘಾಮಠದ ಶ್ರೀ ಮೋಕ್ಷಪತಿ ಮಹಾಸ್ವಾಮಿ, ಚಿತ್ರದುರ್ಗ ಮುರುಘಾಮಠದ ಗುರುಮಠಕಲ್ ಖಾಸ ಮಠದ ಶಾಂತವೀರಗುರು ಮುರುಘರಾಜೇಂದ್ರ ಮಹಾಸ್ವಾಮಿ, ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ಎಸ್‌ಜೆಎಂ ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯ ಡಾ.ಬಸವಕುಮಾರ ಮಹಾಸ್ವಾಮಿಗಳು, ದಾವಣಗೆರೆ ವಿರಕ್ತಮಠದ ಡಾ.ಬಸವಪ್ರಭು ಮಹಾಸ್ವಾಮಿಗಳು ಬಾಗವಹಿಸಲಿದ್ದಾರೆ ಎಂದರು.

ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಕೆ.ಎಸ್. ನವೀನ್, ಮಾಜಿ ಶಾಸಕ ಪಿ.ರಮೇಶ್, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ರಾಜ್ಯ ಕಾರ್ಯಧ್ಯಕ್ಷ ಈಚಕಟ್ಟದ ಸಿದ್ಧವೀರಪ್ಪ, ಜಿ.ಪಂ.ಸದಸ್ಯ ಹಾಗೂ ವಕೀಲರಾದ ನಂದನಹೊಸೂರಿನ ಜಿ.ಹೆಚ್.ಶಿವಕುಮಾರ್, ಗ್ರಾಮದ ವೀರಭದ್ರ ಸ್ವಾಮಿ ದೇವಸ್ಥಾನ ಕಮಿಟಿ ಧರ್ಮದರ್ಶಿ ಎಂ.ಪ್ರಸನ್ನ ಕುಮಾರ್, ನಿವೃತ್ತ ಪ್ರಾಚಾರ್ಯ ಶಿವಗಂಗಾದ ಎಸ್.ಎಂ.ಕೊಟ್ರೇಶಪ್ಪ, ವೀರಭದ್ರಸ್ವಾಮಿ ದೇವಾಲಯದ ಹಿರಿಯ ಅರ್ಚಕ ವೀರಭದ್ರಪ್ಪ ಪಾಲ್ಗೊಳುವರು.

"ಅಥಣಿ ಮುರುಘೇಂದ್ರ ಶಿವಯೋಗಿ"ಗಳವರ ವಿಷಯ ಕುರಿತಾಗಿ ನಿವೃತ್ತ ಉಪನ್ಯಾಸಕ ತಿಮ್ಮಪ್ಪಯ್ಯನ ಹಳ್ಳಿಯ ಜಿ.ಟಿ.ನಂದೀಶ್ ನಡೆಸಿಕೊಡಲಿದ್ದಾರೆ. ಗೋಷ್ಠಿಯ ಅಧ್ಯಕ್ಷತೆಯನ್ನು ನಿವೃತ್ತ ಶಿಕ್ಷಕರಾದ ಕೆ.ಎಸ್.ಮಹಾದೇವಪ್ಪ ವಹಿಸಲಿದ್ದಾರೆ. ಜಮುರಾ ಕಲಾವಿದರಿಂದ ವಚನ ಸಂಗೀತ ನಡೆಯಲಿದೆ. ಸುತ್ತಮುತ್ತಲಿನ ಗ್ರಾಮಸ್ಥರು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಕೊರಿದ್ದಾರೆ.

# ಒಳ ಮೀಸಲಾತಿ: ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ

» **ಚಿತ್ರದುರ್ಗ**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳಲ್ಲಿನ ಅಸ್ಪೃಶ್ಯರಿಗೆ ಒಳ ಮೀಸಲಾತಿ ನೀಡುವ ಅಧಿಕಾರ ಆಯಾ ರಾಜ್ಯಗಳಿಗಿದೆ ಎಂದು ಸುಪ್ರೀಂಕೋರ್ಟ್ ಐತಿಹಾಸಿಕ ತೀರ್ಪು ನೀಡಿರುವುದನ್ನು ಸ್ವಾಗತಿಸಿರುವ ಮಾದಿಗ ಮಹಾಸಭಾದವರು ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಶುಕ್ರವಾರ ಮಾಲಾರ್ಪಣೆ ಸಲ್ಲಿಸಿ ಸಂಭ್ರಮಿಸಿದರು.



ಪರಿಶಿಷ್ಟ ಜಾತಿಯಲ್ಲಿರುವ 101 ಉಪ ಜಾತಿಗಳಲ್ಲಿನ ನಿಜವಾಗಿಯೂ ತುಳಿತಕ್ಕೊಳಗಾಗಿರುವವರಿಗೆ ಹೊಲೆಯ, ಮಾದಿಗರಿಗೆ ಸುಪ್ರೀಂಕೋರ್ಟ್ ತೀರ್ಪಿನ ಅನ್ವಯ ಒಳ ಮೀಸಲಾತಿಯನ್ನು ಕಲ್ಪಿಸಿದರೆ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ರಾಜಕೀಯವಾಗಿ ಸಮಾಜದ ಮುಖ್ಯವಾಹಿನಿಗೆ ಬರಲು ನೆರವಾಗಲಿದ್ದು, ಕಳೆದ ಮೂವತ್ತು ನಲವತ್ತು ವರ್ಷಗಳಿಂದ ನಡೆಸುತ್ತಿರುವ ಹೋರಾಟಕ್ಕೆ ಜಯ ಸಿಕ್ಕಂತಾಗಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಡ ಮಾಡದೆ ಒಳ ಮೀಸಲಾತಿಗೆ ಆದೇಶ ಹೊರಡಿಸುವಂತೆ ಮಾದಿಗ ಮಹಾಸಭಾ ರಾಜ್ಯಾಧ್ಯಕ್ಷ ಹನುಮಂತಪ್ಪ ದುರ್ಗ ಒತ್ತಾಯಿಸಿದರು.ದೇವರಾಜ್ ನಗರಂಗೆರೆ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಎಂ.ಲಕ್ಷ್ಮಣ್, ನ್ಯಾಯವಾದಿಗಳಾದ ಆರ್.ನಿಂಗಪ್ಪ, ಸುರೇಶ್ ಭಂಜಿಗೆರೆ, ಪಟ್ಟಣ ಪಂಚಾಯಿತಿ ಮಾಜಿ ಅಧ್ಯಕ್ಷ ನಾಕಿಕೆರೆ ಹನುಮಂತಪ್ಪ, ಸೋಮಣ್ಣ ಓ.ಚಿಕ್ಕಪ್ಪನಹಳ್ಳಿ, ವೆಂಕಟೇಶ್ ದೊಡ್ಡೇರಿ, ನಾಗೇಂದ್ರಪ್ಪ,ಹೆಗ್ಗೆರೆಶಂಕರ್‌ಸೇರಿದಂತೆನೂರಾರು ವಿದ್ಯಾರ್ಥಿಗಳು ಈ ಸಂದರ್ಭದಲ್ಲಿದ್ದರು.

# ಹೊಸಹಳ್ಳಿ ಸರ್ಕಾರಿ ಶಾಲೆ : ಸ್ಮಾರ್ಟ್ ಟಿ.ವಿ.ಕೊಡುಗೆ ನೀಡಿದ ದಾನಿಗಳಿಗೆ ಸನ್ಮಾನ



» **ಚಳ್ಳಕೆರೆ**

ಗ್ರಾಮೀಣ ಭಾಗಗಳ ಶಾಲೆಗಳಲ್ಲಿ ವಿದ್ಯಾರ್ಥಿಗಳು ಶ್ರದ್ದೆಯಿಂದ ವಿದ್ಯೆಯನ್ನು ಕಲಿಯುತ್ತಾರೆ. ಇತ್ತೀಚಿನ ದಿನಗಳಲ್ಲಿ ಎಲ್ಲಾ ವಿದ್ಯಾರ್ಥಿಗಳಲ್ಲೂ ಕಲಿಕೆಯಲ್ಲಿ ಆಸಕ್ತಿ ಮೂಡಿದೆ. ಶಿಕ್ಷಣ ಇಲಾಖೆ ಶೈಕ್ಷಣಿಕ ಅಭಿವೃದ್ಧಿಗೆ ನೂತನ ತಾಂತ್ರಿಕತೆಯನ್ನು ಅಳವಡಿಸಿಕೊಂಡು ಮುಂದುವರೆಯುತ್ತಿದೆ. ಪ್ರಾಥಮಿಕ, ಪ್ರೌಢ ಹಂತದಲ್ಲೇ ಸ್ಮಾರ್ಟ್‌ಕ್ಲಾಸ್‌ಗಳ ಮೂಲಕ ಅಭ್ಯಾಸ ಮುಂದುವರೆಸಿದ್ದು, ಇಂತಹ ಪ್ರಯೋಜನ ನಮ್ಮ ಶಾಲೆಗೂ ಸಹ ದೊರೆಯಲಿದೆ, ವಿದ್ಯಾರ್ಥಿಗಳ ಪರವಾಗಿ ದಾನಿಗಳನ್ನು ಅಭಿನಂದಿಸುವುದಾಗಿ ಹೊಸಹಳ್ಳಿ ಸರ್ಕಾರಿ ಹಿರಿಯಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಕೆ.ಎಸ್.ಶ್ರೀಕಾಂತ್ ತಿಳಿಸಿದರು.

ಅವರು, ಶುಕ್ರವಾರ ತಮ್ಮ ಶಾಲೆಯಲ್ಲಿ ಸೇವಾ ಅವಧಿಯನ್ನು ಮುಗಿಸಿ ನಿವೃತ್ತರಾದ ಮುಖ್ಯ ಶಿಕ್ಷಕ ಎನ್.ಎಸ್.ನಟರಾಜ್‌ರವರಿಗೆ ಸನ್ಮಾನ ಮತ್ತು ಶಾಲೆಗೆ ಉಚಿತವಾಗಿ ಸ್ಮಾರ್ಟ್ ಟಿ.ವಿ.ಕೊಡುಗೆಯಾಗಿ ನೀಡಿದ ದಾನಿಗಳಿಗೆ ಅಭಿನಂದನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಗ್ರಾಮೀಣ ಭಾಗಗಳ ಶಾಲೆಗಳಿಗೆ ದಾನಿಗಳು ಕೊಡುಗೆ ಎಲ್ಲಾ ಕೊಡುಗೆಗಳು ಅತ್ಯಮೂಲ್ಯವೆಂದು ಅವರು ತಿಳಿಸಿದರು.

ನಿವೃತ್ತ ಮುಖ್ಯ ಶಿಕ್ಷಕ ಎನ್.ಎಸ್.ನಟರಾಜ್, ಗ್ರಾಮೀಣ ಪ್ರದೇಶದಲ್ಲಿ ವಿದ್ಯಾರ್ಥಿಗಳು ಆಸಕ್ತಿಯಿಂದ ಶಿಕ್ಷಣ ಕಲಿಯುತ್ತಿದ್ಧಾರೆ. ವಿದ್ಯಾರ್ಥಿಗಳ ಆಸಕ್ತಿಯನ್ನು ಗಮನಿಸಿ ಈ ಶಾಲೆಗೆ ಸ್ಮಾರ್ಟ್ ಟಿ.ವಿಯನ್ನು ನೀಡಲಾಗಿದೆ. ಶಾಲೆಗೆ ಸ್ಮಾರ್ಟ್ ಟಿ.ವಿ.ಯನ್ನು ಕೊಡುಗೆಯಾಗಿ ನೀಡಿದ ಶಂಕರಮೂರ್ತಿ, ಕರಿಬಸಪ್ಪರವರನ್ನು ಎಲ್ಲಾ ವಿದ್ಯಾರ್ಥಿಗಳ ಪರವಾಗಿ ಅಭಿನಂದಿಸುವುದಾಗಿ ತಿಳಿಸಿದರು. ಕಾರ್ಯಕ್ರಮದಲ್ಲಿ ಶಿಕ್ಷಕಿ ರಾಜೇಶ್ವರಿನಟರಾಜ್, ಸಂದೇಶ್,ಮಂಜುನಾಥರೆಡ್ಡಿ, ಸತ್ಯನಾರಾಯಣರೆಡ್ಡಿ, ಹೊಸಹಳ್ಳಿ ಕರಿಬಸಪ್ಪ, ಸಿಆರ್‌ಪಿ ತಿಪ್ಪೇಸ್ವಾಮಿ, ಮಾರಣ್ಣ, ಜಿ.ಟಿ.ಮಲ್ಲಿಕಾರ್ಜುನ್, ಶ್ರೀನಿವಾಸ್, ತಿಪ್ಪೇಸ್ವಾಮಿ, ಇಂದಿರಾ, ಶಿಕ್ಷಕರಾದ ನುಸ್ರತ್‌ಉನ್ನೀಸಾ, ಚಿಟ್ಟಿಬಾಬು, ಗಾಯಿತ್ರಿದೇವಿ, ಮಂಜುಳಾ, ಆಶಾ, ಶಶಿಕಲಾ, ರಹಮಾನ್ ಮುಂತಾದವರು ಉಪಸ್ಥಿತರಿದ್ದರು.

# ಏರ್‌ಟೆಲ್ ಟವರ್ ಅಳವಡಿಸಲು ಅನುಮತಿ ಬೇಡ

» **ಚಿತ್ರದುರ್ಗ**

ಜೋಗಿಮಟ್ಟಿ ರಸ್ತೆ ಮೂರನೆ ಕ್ರಾಸ್ ಶೃಂಗೇರಿ ಮಠದ ಹಿಂಭಾಗ ಮನೆಯ ಮುಂದಿನ ಸೈಟ್‌ನಲ್ಲಿ ಅವಿನಾಶ್ ಎಂಬುವವರು ಏರ್‌ಟೆಲ್ ಟವರ್ ಅಳವಡಿಸಲು ಹೊರಟಿರುವುದನ್ನು ಅಲ್ಲಿನ ಬಹುತೇಕ ನಿವಾಸಿಗಳು ವಿರೋಧಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ನೀಡಿದ್ದಾರೆ.




ಜನಸಾಮಾನ್ಯರು ವಾಸಿಸುವ ಪ್ರದೇಶಗಳಲ್ಲಿ ಯಾವುದೇ ರೀತಿಯ ಟವರ್‌ಗಳನ್ನು ಅಳವಡಿಸಬಾರದೆಂಬ ನಿಯಮವಿದ್ದರೂ ಹತ್ತು ಅಡಿ ಉದ್ದ ಹಾಗೂ ಅಗಲ ಗುಂಡಿ ತೋಡಿ ಟವರ್ ಅಳವಡಿಸುವುದರಿಂದ ಯಾವ ಸಮಯದಲ್ಲಿ ಅಪಾಯ ಸಂಭವಿಸುತ್ತದೋ ಎನ್ನುವುದನ್ನು ಹೇಳುವಂತಿಲ್ಲ.

ವೃದ್ದರು, ಅಂಗವಿಕಲರು, ಗರ್ಭಿಣಿಯರು, ಬಾಣಂತಿಯರು, ಕ್ಯಾನ್ಸರ್ ರೋಗ ಪೀಡಿತರು, ಅಸ್ತಮಾದವರು ಇದ್ದಾರೆ.

ಟವರ್ ಅಳವಡಿಸುವ ಜಾಗದ ಎದುರಿನಲ್ಲಿಯೇ ಮಹಿಳಾ ಹಾಸ್ಟೆಲ್ ಕೂಡ ಇದೆ. ಕಬೀರಾನಂದ ಮಠದ ಶಾಲೆ ಇಲ್ಲಿಯೇ ಇರುವುದರಿಂದ ಪ್ರತಿನಿತ್ಯ ನೂರಾರು ಮಕ್ಕಳು ಓಡಾಡುತ್ತಿರುತ್ತಾರೆ. ಹಾಗಾಗಿ ಇಲ್ಲಿ ಟವರ್ ನಿಲ್ಲಿಸಲು ಅವಿನಾಶ್‌ಗೆ ಅನುಮತಿ ನೀಡದೆ ಮುಂದೆ ಆಗಬಹುದಾದ ಅನಾಹುತವನ್ನು ತಪ್ಪಿಸುವಂತೆ ಹೆಚ್. ರಾಮಮೂರ್ತಿ, ವೆಂಕಟೇಶ್, ಕಮಲಮ್ಮ, ಗಂಗಮ್ಮ, ಕೋಮಲ, ಗಿರಿಜ, ಹರೀಶ, ಸವಿತ, ಇಂದ್ರಮ್ಮ, ದೀಪು, ಅಶೋಕ, ಸರೋಜ ಇನ್ನು ಮುಂತಾದವರು ಒತ್ತಾಯಿಸಿದ್ದಾರೆ.

**ಪ್ರಮುಖ ಸುದ್ದಿ**

### ಡೆಂಗ್ಯೂ ನಿಯಂತ್ರಣಕ್ಕೆ ಲಾರ್ವಾಹಾರಿ ಮೀನು ವಿತರಣೆ

# ಜನ ಜಾಗೃತರಾಗಿ ಡೆಂಗ್ಯೂ ನಿಯಂತ್ರಣಕ್ಕೆ ಸಹಕರಿಸಿ

» **ಚಿತ್ರದುರ್ಗ**

ಜನ ಜಾಗೃತರಾಗಿ ಡೆಂಗ್ಯೂ ನಿಯಂತ್ರಣಕ್ಕೆ ಸಹಕರಿಸಬೇಕು ಎಂದು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಕಾಶೀ ಮನವಿ ಮಾಡಿದರು.




ಆರೋಗ್ಯ ಇಲಾಖೆ, ನಗರಸಭೆ ವತಿಯಿಂದ ಶುಕ್ರವಾರ ಸೊಳ್ಳೆತಾಣಗಳ ನಾಶ ಮಾಡುವ ಲಾರ್ವಾ ಸಮೀಕ್ಷೆ ನಗರದ ಎಲ್ಲಾ 36 ವಾರ್ಡ್‌ಗಳಲ್ಲಿ ನಡೆಯಿತು. ಹೆಚ್ಚು ಲಾರ್ವಾ ಸಾಂದ್ರತೆ 100 ಮನೆಯಲ್ಲಿ 20 ಮನೆಯಲ್ಲಿ ಲಾರ್ವಾ ಕಂಡು ಬಂದಿದ್ದ ವಾರ್ಡ್ ಸಂಖ್ಯೆ 35ರ ಸಾಧಿಕ್ ನಗರದಲ್ಲಿ ಲಾರ್ವಾಹಾರಿ ಗಪ್ಪಿ ಗಂಬೂಷಿಯಾ ಮೀನು ಮರಿಗಳನ್ನು ಪ್ರತಿ ಮನೆಗೂ ವಿತರಿಸಿ ಗುಂಪು ಸಭೆ ನಡೆಸಿ ಅವರು ಮಾತನಾಡಿದರು.

ಡೆಂಗ್ಯೂ ನಿಯಂತ್ರಣಕ್ಕೆ ಜನರು ಜಾಗೃತರಾಗಬೇಕು. ತಮ್ಮ ಮನೆಯ ಒಳಗೆ ಹೊರಗೆ ಸ್ವಚ್ಛತಾ ಕಾರ್ಯಮಾಡಿಕೊಳ್ಳಿ. ಇಲ್ಲವಾದಲ್ಲಿ ಡೆಂಗ್ಯೂ ನಿಮಗಷ್ಟೆ ಬಾದಿಸದೆ ನಿಮ್ಮ ಅಕ್ಕ ಪಕ್ಕದ ಸಮುದಾಯಕ್ಕೂ ಹರಡುತ್ತದೆ. ಈ ದಿನ ನಿಮ್ಮ ಮನೆಗಳ ನೀರಿನ ತೊಟ್ಟಿಗೆ ಲಾರ್ವಾಹಾರಿ ಮೀನು ಬಿಡಲಾಗಿದ್ದು, ತೊಟ್ಟಿ ತೊಳೆದುಕೊಳ್ಳುವಾಗ ಮೀನುಗಳನ್ನು ಒಂದು ಪಾತ್ರೆಯಲ್ಲಿ ಸೋಸಿಕೊಂಡು ಸ್ವಚ್ಚಮಾಡಿ, ತೊಟ್ಟಿ ಒಣಗಿಸಿ ನೀರು ತುಂಬಿಸಿ ಮತ್ತೆ ಮೀನು ಬಿಡಿ. ಈ ವಾರ್ಡ್‌ನ ಎಲ್ಲಾ ಮನೆಗಳು ಸೊಳ್ಳೆ ಉತ್ಪತ್ತಿ ತಾಣಗಳಾಗಿವೆ. ಬುದ್ದಿವಂತರಾಗಿ ಸೊಳ್ಳೆಗಳಿಂದ ಸ್ವಯಂ ರಕ್ಷಣೆ ಮಾಡಿಕೊಳ್ಳಿ ಎಂದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ, ಸಾರ್ವಜನಿಕರು ತೆರೆದ ಪರಿಕರಗಳಲ್ಲಿ ನೀರು ಸಂಗ್ರಹ ಮಾಡುವುದರಿಂದ ಸೊಳ್ಳೆಗಳ ಸಂತಾನೋತ್ಪತ್ತಿ ತಾಣವಾಗುತ್ತವೆ. ಹಾಗಾಗಿ ಇದಕ್ಕೆ ಅವಕಾಶ ಮಾಡಿಕೊಡದೆ ಡೆಂಗ್ಯೂ ನಿಯಂತ್ರಣಕ್ಕೆ ನಾವೆಲ್ಲರೂ ಒಟ್ಟಾಗಿ ಪರಿಸರ ಸ್ವಚ್ಛತೆ ಕಾಪಾಡೋಣ ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಮಾತನಾಡಿ, ಡೆಂಗ್ಯೂ ನಿಯಂತ್ರಣಕ್ಕೆ ಜಾಗೃತಿಯೇ ಮದ್ದು. ಸ್ವಚ್ಛತೆ ಕಾಪಾಡಿ ಸೊಳ್ಳೆಗಳ ಉತ್ಪತ್ತಿ ತಾಣ ನಾಶ ಮಾಡದಿದ್ದರೆ ಕೀಟಗಳು ನಮನ್ನಾಳುತ್ತವೆ. ಜಾಗೃತರಾಗಿ, ಬುದ್ದಿವಂತರಾಗಿ ಮನೆ ಒಳಗೆ ಹೊರಗೆ ಸೊಳ್ಳೆಗಳ ಉತ್ಪತ್ತಿಯಾಗದಂತೆ ನೀರು ಸಂಗ್ರಹಿಸುವ ಪರಿಕರಗಳನ್ನು ವಾರಕೊಮ್ಮೆಯಾದರು ಚನ್ನಾಗಿ ತಿಕ್ಕಿ ತಿಕ್ಕಿ ತೊಳೆದು ಒಣಗಿಸಿ ನೀರು ಸಂಗ್ರಹಿಸಿ ಸೊಳ್ಳೆಗಳ ಕಡಿತದಿಂದ ಸ್ವಯಂ ರಕ್ಷಣೆ, 1 ಭಾಗ ಬೇವಿನ ಎಣ್ಣೆ, 3 ಭಾಗ ಕೊಬ್ಬರಿ ಎಣ್ಣೆ ಈ ಪ್ರಮಾಣದಲ್ಲಿ ಮಿಶ್ರಣ ಮಾಡಿ ಲೇಪನ ಮಾಡಿಕೊಳ್ಳಿ, ಸೊಳ್ಳೆ ಪರದೆ ಬಳಕೆ ಮಾಡಿ ಮುಸ್ಸಂಜೆ, ಮುಂಜಾವಿನ ಸಮಯದಲ್ಲಿ ಸೊಳ್ಳೆ ಬತ್ತಿ, ಬೇವಿನ ಸೊಪ್ಪಿನ ಹೊಗೆಯ ಧೂಪವನ್ನು ಬೆಳಗಿಸಿ ಯಾವುದೇ ಜ್ವರವಿರಲಿ ಸ್ವಯಂ ಚಿಕಿತ್ಸೆ ಮಾಡಿಕೊಳ್ಳದೇ ಹತ್ತಿರದ ಆರೋಗ್ಯ ಕೇಂದ್ರದಲ್ಲಿ ಉಚಿತವಾಗಿ ತಪಾಸಣೆ ಚಿಕಿತ್ಸೆ ಪಡೆದು ಕೊಳ್ಳಿ ಎಂದರು.

ಡೆಂಗ್ಯೂ ಪ್ರಕರಣದ ಮನೆಗೆ ಬೇವಿನ ಎಣ್ಣೆ ನಗರಸಭೆಯಿಂದ ವಿತರಿಸಲಾಯಿತು. ಈ ಸಂದರ್ಭದಲ್ಲಿ ನಗರಸಭೆಯ ಪರಿಸರ ಇಂಜಿನಿಯರ್ ಜಾಫರ್, ಬುದ್ದನಗರ ಆರೋಗ್ಯ ಕೇಂದ್ರದ ಡಾ.ಸುರೇಂದ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಬಿ.ಮೂಗಪ್ಪ, ಬಿ.ಜಾನಕಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸುರೇಶ ಬಾಬು, ಗುರುಮೂರ್ತಿ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ತಿಪ್ಪಮ್ಮ, ಆಶಾ ಕಾರ್ಯಕರ್ತೆಯರು, ನರ್ಸಿಂಗ್ ವಿದ್ಯಾರ್ಥಿಗಳು ಸಾರ್ವಜನಿಕರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ರೈಲ್ವೆ ಯೋಜನೆಗಳಿಗೆ ವೇಗ ನೀಡಿ: ಸಂಸದ ಕಾರಜೋಳ ಮನವಿ

» **ಮೊದಲ ಪುಟದಿಂದ**

ಹೀಗಿದ್ದೂ ಕೂಡ ಚಿತ್ರದುರ್ಗಕ್ಕೆ ಅಭಿವೃದ್ಧಿಯ ದೃಷ್ಟಿಯಿಂದ ಹೆಚ್ಚಿನ ಪ್ರಾಮುಖ್ಯತೆ ರೈಲ್ವೆ ಸಚಿವಾಲಯದಿಂದ ದೊರೆತಿಲ್ಲ. ಈ ಹಿನ್ನೆಲೆಯಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಈಗಾಗಲೇ ಚಾಲನೆಯಲ್ಲಿರುವ ಯೋಜನೆಗಳಿಗೆ ವೇಗ ನೀಡುವುದರ ಜೊತೆಗೆ ಹೊಸ ಯೋಜನೆಗಳನ್ನು ಮಂಜೂರು ಮಾಡುವಂತೆ ದೆಹಲಿಯಲ್ಲಿ ರೈಲ್ವೆ ಸಚಿವರಾದ ಅಶ್ವಿನಿ ವೈಷ್ಣವ್‌ರವರನ್ನು ಸಂಸದ ಗೋವಿಂದ ಕಾರಜೋಳ್‌ರವರು ಭೇಟಿ ಮಾಡಿ ಮನವಿ ಮಾಡಿದರು.

**ಪತ್ರದ ಸಾರಾಂಶ :** ಚಿತ್ರದುರ್ಗ ಐತಿಹಾಸಿಕ ಹಿನ್ನೆಲೆಯುಳ್ಳದ್ದಾಗಿರುವುದರಿಂದ ಈಗಾಗಲೇ "ಅಮೃತ್ ಭಾರತ್ ನಿಲ್ದಾಣ" ಯೋಜನೆಯಡಿ ಚಿತ್ರದುರ್ಗದಲ್ಲಿ ನಿರ್ಮಾಣವಾಗುತ್ತಿರುವ ನೂತನ ನಿಲ್ದಾಣ ಕಾಮಗಾರಿಯಲ್ಲಿ ಐತಿಹಾಸಿಕ ಪರಂಪರೆಯನ್ನು/ವೈಭವವನ್ನು ಬಿಂಬಿಸುವ ವಾಸ್ತುಶಿಲ್ಪವನ್ನು ಅಳವಡಿಸಿ ನಿಲ್ದಾಣದ ಮುಂಭಾಗದ ಇಟಜತಚಿಣುಂಟಿ ಕೋಟೆಯ ಮಾದರಿಯನ್ನು ಹೋಲುವಂತೆ ನಿರ್ಮಾಣ ಮಾಡಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡುವುದು. ಈಗಾಗಲೇ ಶೇಕಡ 50:50 ರ ವೆಚ್ಚ ಹಂಚಿಕೆ ಆಧಾರದಲ್ಲಿ ಪ್ರಗತಿಯಲ್ಲಿರುವ ದಾವಣಗೆರೆ–ಚಿತ್ರದುರ್ಗ–ತುಮಕೂರು ನೇರ ರೈಲು ಮಾರ್ಗವು ಕರ್ನಾಟಕ ರಾಜ್ಯದ ಪಾಲನ್ನು ಬಿಡುಗಡೆ ಮಾಡದೇ ಇರುವ ಕಾರಣ ನಿಧಾನ ಗತಿಯಲ್ಲಿ ಸಾಗುತ್ತಿದೆ. ಪ್ರಯುಕ್ತ, ರಾಜ್ಯ ಸರ್ಕಾರದ ಪಾಲನ್ನು ಶೀಘ್ರವಾಗಿ ನೀಡಲು ನಿರ್ದೇಶನ ನೀಡುವುದು.ಈಗಾಗಲೇ ಪ್ರಗತಿಯಲ್ಲಿ ರಾಯದುರ್ಗ–ತುಮಕೂರು ರೈಲು ಮಾರ್ಗದ ಕಾಮಗಾರಿ ನಿಧಾನಗತಿಯಲ್ಲಿ ನಡೆಯುತ್ತಿದೆ, ಅಗತ್ಯವಾಗಿರುವ ಅನುದಾನವನ್ನು ಆದಷ್ಟು ಬೇಗ ಒದಗಿಸುವ ಮೂಲಕ ಶೀಘ್ರವಾಗಿ ಯೋಜನೆಯನ್ನು ಪೂರ್ಣಗೊಳಿಸಲು ಕ್ರಮಕೈಗೊಳ್ಳುವುದು. ಚಳ್ಳಕೆರೆ ನಗರದಲ್ಲಿ ಚಳ್ಳಕೆರೆ–ಪರಶುರಾಂಪುರ ರಸ್ತೆಯಲ್ಲಿ ಬರುವ ರೈಲ್ವೆ ಲೆವೆಲ್ ಕ್ರಾಸಿಂಗ್ 45 ಕ್ಕೆ ಮೇಲು ಸೇತುವೆ ನಿರ್ಮಾಣ ಮಾಡುವುದು.ಹೊಸದುರ್ಗ ರೋಡ್ ರೈಲ್ವೆ ಸ್ಟೇಷನ್‌ನಲ್ಲಿ ವಾಸ್ಕೋಡಿಗಾಮ–ಯಶವಂತಪುರ ಡೈಲಿ ಎಕ್ಸ್‌ಪ್ರೆಸ್, ಬೆಳಗಾವಿ–ಮೈಸೂರು ವಿಶ್ವಮಾನವ ಎಕ್ಸ್‌ಪ್ರೆಸ್, ಚಾಲುಕ್ಯ ಎಕ್ಸ್‌ಪ್ರೆಸ್, ಗೋಲಗುಂಬಜ್ ಎಕ್ಸ್‌ಪ್ರೆಸ್ ಟ್ರೈನುಗಳಿಗೆ ನಿಲುಗಡೆ ಒದಗಿಸುವುದು.

### ಪೂರ್ವಭಾವಿ ಸಭೆ

» **ಚಿತ್ರದುರ್ಗ**

ವಾಲ್ಮೀಕಿ ಅಭಿವೃದ್ಧಿ ನಿಗಮ ಹಾಗೂ ಮುಡಾ ಹಗರಣಗಳ ಬಗ್ಗೆ ಪ್ರತಿ ಪಕ್ಷಗಳ ಆರೋಪದ ಬಗ್ಗೆ. ವಿರೋಧ ಪಕ್ಷಗಳು ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯನವರ ಮೇಲೆ ಇಲ್ಲಸಲ್ಲದ ಆರೋಪಗಳ ಬಗ್ಗೆ ಮಾತನಾಡು ತ್ತಿರುವುದನ್ನು ಖಂಡಿಸಿ, ಚಿತ್ರದುರ್ಗ ಸಿದ್ಧರಾಮಯ್ಯನವರ ಅಭಿಮಾನಿಗಳು ದಿನಾಂಕ:03–08–2024ರ ಬೆಳಿಗ್ಗೆ 9.00ಗಂಟೆಗೆ ಚಿತ್ರದುರ್ಗ ನಗರ ಪ್ರವಾಸಿ ಮಂದಿರದಲ್ಲಿ ಪೂರ್ವಭಾವಿ ಸಭೆಯನ್ನು ಹಮ್ಮಿಕೊಂಡಿರುತ್ತೇವೆ. ತಾವುಗಳು ಈ ಸಭೆಗೆ ಆಗಮಿಸಿ ತಮ್ಮ ಸಲಹೆ ಸೂಚನೆಗಳನ್ನು ನೀಡಬೇಕೆಂದು ಶೋಷಿತ ಸಮಾಜದ ಅಧ್ಯಕ್ಷರಾದ ಸಿ.ಟಿ.ಕೃಷ್ಣಮೂರ್ತಿ ಮನವಿ ಮಾಡಿದ್ದಾರೆ.

### ವೈದ್ಯಕೀಯ ವಿದ್ಯಾರ್ಥಿಯ ಆತ್ಮಹತ್ಯೆಯ ಪ್ರಕರಣ ನಿಷ್ಪಕ್ಷಪಾತ ತನಿಖೆ ಮಾಡಿ

» **ಚಿತ್ರದುರ್ಗ**

ವೈದ್ಯಕೀಯ ಶಿಕ್ಷಣದ ವಿದ್ಯಾರ್ಥಿಯ ಆತ್ಮಹತ್ಯೆಯ ಪ್ರಕರಣವನ್ನು ನಿಷ್ಪಕ್ಷಪಾತವಾಗಿ ತನಿಖೆ ಮಾಡುವಂತೆ ಜಿಲ್ಲಾಧಿಕಾರಿಗಳಿಗೆ ಎಬಿವಿಪಿ ಮನವಿ ಸಲ್ಲಿಸಲಾಯಿತು. ಚನ್ನರಾಯಪಟ್ಟಣ ಮೂಲದ ಮನೋಜ್ ಎಂಬ ವೈದ್ಯಕೀಯ ಶಿಕ್ಷಣದ ಎರಡನೇ ವರ್ಷದ ವಿದ್ಯಾರ್ಥಿಯು ಚಿತ್ರದುರ್ಗ ನಗರದ ಬಸವೇಶ್ವರ ವೈದ್ಯಕೀಯ ಶಿಕ್ಷಣ ಮಹಾವಿದ್ಯಾಲಯದಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದು, ಬುಧವಾರ ರಾತ್ರಿ ಅದೇ ವಿದ್ಯಾರ್ಥಿನಿಲಯದ ಜೆ.ಎಂ.ಐ.ಟಿ ಕ್ಯಾಂಪಸ್‌ನಲ್ಲಿದ್ದಂತಹ ನಿಲಯದ ಕೊಠಡಿಯಲ್ಲಿ ಆತ್ಮಹತ್ಯೆಗೆ ಶರಣಾಗಿರುತ್ತಾರೆ. ಈ ಹಿನ್ನಲೆಯಲ್ಲಿ ವಿದ್ಯಾರ್ಥಿಯ ಸಾವಿಗೆ ಕಾರಣವನ್ನು ಸೂಕ್ತವಾದ ಹಾಗೂ ನಿಷ್ಪಕ್ಷಪಾತವಾದ ತನಿಖೆಯ ಮೂಲಕ ವಿದ್ಯಾರ್ಥಿಯ ಸಾವಿಗೆ ನ್ಯಾಯ ಒದಗಿಸಬೇಕೆಂದು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು ಈ ಸಂದರ್ಭದಲ್ಲಿ ನಗರ ಕಾರ್ಯದರ್ಶಿ ಗೋಪಿ, ಸಾಮಾಜಿಕ ಜಾಲತಾಣ ನಾನು ಚಿತ್ರಸ್ವಾಮಿ, ಹಾಸ್ಟೆಲ್ ಪ್ರಮುಖ್ ಸುದೀಪ್.ಪಿ.ಕೆ, ಕಾರ್ಯಕರ್ತರಾದ ಸಂಜಯ್, ನಿತೀಶ್, ಅನಿಲ್, ವರವೇಶ್, ಪ್ರಶಾಂತ್, ಅಪ್ಪು ಮತ್ತು ವೆಂಕಿ ಮತ್ತು ಇತರರು ಭಾಗವಹಿಸಿದ್ದರು.

### ವಿದ್ಯುತ್ ವ್ಯತ್ಯಯ

» **ದಾವಣಗೆರೆ**

ಜಲಸಿರಿ ಯೋಜನೆಯಡಿಯಲ್ಲಿ ನಿರಂತರ ಶುದ್ಧಕುಡಿಯುವ ನೀರಿನ ಸರಬರಾಜು ಯೋಜನೆ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಆಗಸ್ಟ್ 3 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಕೆ.ಟಿ.ಜೆ ಫೀಡರ್ ವ್ಯಾಪ್ತಿಯ ಕೆ.ಟಿ.ಜೆ. ನಗರ 1 ರಿಂದ 18ನೇ ಕ್ರಾಸ್, ಶಿವಪ್ಪ ಸರ್ಕಲ್, ಸಿದ್ದಮ್ಮ ಪಾರ್ಕ ಸುತ್ತಮುತ್ತಿಲನ ಪ್ರದೇಶ.ವಿದ್ಯಾರ್ಥಿ ಭವನ ವೃತ,ಡಾಂಗೇ ಪಾರ್ಕ, ಭಗತ್ ಸಿಂಗ್ ನಗರ, ಲೇಬರ್ ಕಾಲೋನಿ, ಸುತ್ತಮುತ್ತಲಿನ ಪ್ರದೇಶಗಳು ವಿದ್ಯುತ್ ವ್ಯತ್ಯಯವಾಗಲಿದೆ .

# 25ನೇ ಕಾರ್ಗಿಲ್ ವಿಜಯ ದಿವಸ ; ಮಾಜಿ ಸೈನಿಕರನ್ನು ಸನ್ಮಾನಿಸಿ ಗೌರವಿಸಿದ ವೇದಾಂತ ಸೆಸಾ ಗೋವಾ

» **ಚಿತ್ರದುರ್ಗ**



ವೇದಾಂತ ಸೆಸಾ ಗೋವಾ ಸಂಸ್ಥೆಯು 25ನೇ ಕಾರ್ಗಿಲ್ ವಿಜಯ ದಿವಸದ ಹಿನ್ನೆಲೆಯಲ್ಲಿ ತಮ್ಮ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿರುವ ನೂರಕ್ಕೂ ಹೆಚ್ಚು ಮಾಜಿ ಸೈನಿಕರನ್ನು ಸನ್ಮಾನಿಸಿ ಗೌರವ ಸಲ್ಲಿಸಿತು. ಕಂಪನಿಯು ತನ್ನ ಭದ್ರತಾ ವಲಯದಲ್ಲಿ ಬಹುತೇಕ ಮಾಜಿ ಸೈನಿಕರನ್ನು ಕೆಲಸಕ್ಕೆ ನೇಮಿಸಿಕೊಂಡಿರುವುದು ವಿಶೇಷ.

ಕಾರ್ಗಿಲ್ ವಿಜಯ ದಿವಸದ ಸ್ಮರಣಾರ್ಥವಾಗಿ ದೇಶದ ರಕ್ಷಣೆಗೆ ಕೊಡುಗೆ ನೀಡಿದ ಮಾಜಿ ಸೈನಿಕರ ಕೊಡುಗೆಯನ್ನು ಗುರುತಿಸಿ ಗೌರವಿಸುವ ಸಲುವಾಗಿ ನಡೆದ ಈ ಸನ್ಮಾನ ಕಾರ್ಯಕ್ರಮವನ್ನು ಐದು ರಾಜ್ಯಗಳಲ್ಲಿ ಆಯೋಜಿಸಲಾಗಿತ್ತು. ಸೆಸಾ ಗೋವಾ ಸೆಕ್ಯುರಿಟಿ ಸಂಸ್ಥೆಯು ತಮ್ಮ ಭದ್ರತಾ ತಂಡದಲ್ಲಿ ಹಲವಾರು ಮಾಜಿ ಸೈನಿಕರನ್ನು ಸೇರಿಸಿಕೊಂಡಿದೆ. ಅವರ ಹಿನ್ನೆಲೆಯನ್ನು ಗಮನದಲ್ಲಿಟ್ಟುಕೊಂಡು ಅವರಿಗೆ ಕೈಗಾರಿಕಾ ವಲಯ ಮತ್ತು ಕಾರ್ಪೊರೇಟ್ ವಲಯದ ಭದ್ರತೆಗೆ ಸಂಬಂಧಿಸಿದ ದೊಡ್ಡ ಜವಾಬ್ದಾರಿಗಳನ್ನು ವಹಿಸಲಾಗಿದೆ.ಈ ಸಂದರ್ಭದಲ್ಲಿ ಮಾತನಾಡಿದ ವೇದಾಂತ ಸೆಸಾ ಗೋವಾ ಐರನ್ ಓರ್ ಸಿಇಒ ಶ್ರೀ. ನವಿನ್ ಜಾಜು ಅವರು, "25ನೇ ಕಾರ್ಗಿಲ್ ವಿಜಯ ದಿವಸ ಆಚರಣೆ ಭಾರತೀಯರ ಹೆಮ್ಮೆಯ ಕ್ಷಣವಾಗಿದೆ. ನಾನು ಎಲ್ಲಾ ಸೈನಿಕರ ತ್ಯಾಗಕ್ಕೆ, ಸೇವೆಗೆ ಸೆಲ್ಯೂಟ್ ಮಾಡುತ್ತೇನೆ. ಸಮಾಜಕ್ಕೆ ಒಳಿತು ಮಾಡುವ ನಮ್ಮ ಉದ್ದೇಶದ ಭಾಗವಾಗಿ ಸೈನಿಕರನ್ನು ಸನ್ಮಾನಿಸಿ ಗೌರವಿಸಲು ಹೆಮ್ಮೆ ಪಡುತ್ತೇವೆ" ಎಂದರು. ಈ ಸಂದರ್ಭದಲ್ಲಿ ಮಾತನಾಡಿದ ವೇದಾಂತ ಐಓಕೆ ಸಿಇಓ ಶ್ರೀಶೈಲ ಗೌಡ ಅವರು, "ಸಶಸ್ತ್ರ ಪಡೆಗಳ ಶೌರ್ಯ, ಬದ್ಧತೆಗೆ ನಮಸ್ಕಾರ. ಕಾರ್ಗಿಲ್ ವಿಜಯ ದಿವಸದ ಹಿನ್ನೆಲೆಯಲ್ಲಿ ಸೈನಿಕರ ಕೊಡುಗೆ, ತ್ಯಾಗ, ಬಲಿದಾನಗಳಿಗೆ ಹೆಮ್ಮೆಯಿಂದ ಗೌರವ ಸಲ್ಲಿಸುತ್ತಿದ್ದೇವೆ" ಎಂದು ಹೇಳಿದರು. ಸೆಸಾ ಗೋವಾದ ಸಿಎಸ್‌ಓ ಶ್ರೀ ನಂದ್ ಭಟ್ ಸೈನಿಕರಿಗೆ ಗೌರವ ಸಲ್ಲಿಸುವ ಕುರಿತು ಹೆಮ್ಮೆ ವ್ಯಕ್ತಪಡಿಸಿದರು. ವೇದಾಂತ ಕಂಪನಿಯು ತಮ್ಮ ಸಂಸ್ಥೆಗೆ ಮಾಜಿ ಸೈನಿಕರನ್ನು ನೇಮಕಾತಿ ಮಾಡಿಕೊಳ್ಳುತ್ತಿದೆ ಮತ್ತು ಸೈನಿಕರ ನೇಮಕಾತಿಗೆ ಉತ್ತಮ ಪ್ರತಿಕ್ರಿಯೆ ದೊರೆತಿದೆ. ಈ ಹಿನ್ನೆಲೆಯಲ್ಲಿ ಕಾರ್ಗಿಲ್ ವಿಜಯ ದಿವಸವನ್ನು ವಿಶೇಷ ರೀತಿಯಲ್ಲಿ ಆಚರಿಸುತ್ತಿದೆ. ಕಳೆದ ವರ್ಷ 'ಗರ್ವದಿಂದ' ಎಂಬ ಅಭಿಯಾನವನ್ನು ಪ್ರಾರಂಭಿಸಿ, ದೇಶಕ್ಕಾಗಿ ದೇಹ ತ್ಯಾಗ ಮಾಡಿದ ವೀರರಿಗೆ ಮತ್ತು ಪರಮವೀರ ಚಕ್ರ ಪ್ರಶಸ್ತಿ ಪುರಸ್ಕೃತರಿಗೆ ಕೃತಜ್ಞತೆ ಸಲ್ಲಿಸಲು ಪತ್ರ ಚಳುವಳಿ ಆಯೋಜಿಸಿತ್ತು. ಪಿವಿಸಿ ಮತ್ತು ಟೈಗರ್ ಹಿಲ್ ಹೀರೋ ಸುಬೇದಾರ್ ಮೇಜರ್ (ಹಾನರರಿ ಕ್ಯಾಪ್ಟನ್) ಯೋಗೇಂದ್ರ ಸಿಂಗ್ ಯಾದವ್ ಅವರು ವಿಡಿಯೋ ಮೂಲಕ ಉದ್ಯೋಗಿಗಳ ಜೊತೆ ಸಂವಹನ ನಡೆಸಿ ಸ್ಫೂರ್ತಿದಾಯಕ ಮಾತುಕತೆ ನಡೆಸಿಕೊಟ್ಟಿದ್ದರು.

ಸೆಸಾ ಗೋವಾದ ಭದ್ರತಾ ತಂಡದ ಉಸ್ತುವಾರಿಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಮಾಜಿ ಸೈನಿಕರಿಗೆ ಶಾಲು ಹೊದೆಸಿ, ಸ್ಮರಣಿಕೆಗಳನ್ನು ನೀಡಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಅವರು ಸೈನಿಕರಾಗಿ ಕೆಲಸ ಮಾಡುತ್ತಿದ್ದಾಗಿನ ಅನುಭವಗಳನ್ನು ಹಂಚಿಕೊಂಡರು. ಸನ್ಮಾನ ಕಾರ್ಯಕ್ರಮದಲ್ಲಿ ಎಸ್ ಬಿ ಯುನ ಉನ್ನತ ಅಧಿಕಾರಿಗಳು ಉಪಸ್ಥಿತರಿದ್ದರು.

# ಒಳಮೀಸಲು ತೀರ್ಪು: ಶೀಘ್ರ ಜಾರಿಗೆ ತನ್ನಿ

» **ಚಿತ್ರದುರ್ಗ**



ಸುಪ್ರೀಂ ಕೋರ್ಟ್ ಆದೇಶ ಮಾಡಿರುವುದರಿಂದ ಮುಖ್ಯಮಂತ್ರಿಗಳು ಈ ವಿಚಾರವನ್ನು ಗಂಭೀರವಾಗಿ ತೆಗೆದುಕೊಂಡು ಈ ಆದೇಶವನ್ನು ಶೀಘ್ರವಾಗಿ ಜಾರಿ ಮಾಡಬೇಕೆಂದು ಸರ್ಕಾರವನ್ನು ಐಮಂಗಲದ ಶ್ರೀ ಮಹಾ ಶಿವಶರಣ ಹರಳಯ್ಯ ಗುರುಪೀಠದ ಶ್ರೀ ಬಸವ ಹರಳಯ್ಯ ಸ್ವಾಮಿಜಿ ಆಗ್ರಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಒಳ ಮೀಸಲಾತಿ ಹೋರಾಟಕ್ಕೆ ಪಂಜಾಬ್ ರಾಜ್ಯದಿಂದ ಪ್ರಾರಂಭವಾಗಿ ಎಲ್ಲಾ ರಾಜ್ಯಗಳಲ್ಲೂ ಸಹ ಹೋರಾಟ ನಡೆದಿದೆ.. ಅದರಲ್ಲೂ ಆಂಧ್ರಪ್ರದೇಶ ಗಟ್ಟಿತನದ ಹೋರಾಟ ನಡೆಸಿದೆ. ನಮ್ಮ ರಾಜ್ಯದಲ್ಲೂ ಸಹ 30 ವರ್ಷಗಳಿಂದ ಹೋರಾಟ ನಡೆಸುತ್ತಾ ಬಂದಿದ್ದೇವೆ. ಅಂತಹ ಹೋರಾಟದಲ್ಲಿ ದಲಿತ, ಮಾದಿಗ ಸಂಘಟನೆ ಹಾಗೂ ಎಲ್ಲಾ ವರ್ಗದ ಪ್ರಜ್ಞಾವಂತ ಹೋರಾಟಗಾರರು ಹೋರಾಟ ನಡೆಸಿದ್ದಾರೆ. ಅರೆಬೆತ್ತಲೆ, ಪಂಜಿನ ಮೆರವಣಿಗೆ, ಜಿಲ್ಲಾಧಿಕಾರಿಗಳ ಕಚೇರಿ ಮುತ್ತಿಗೆ, ಮುಖ್ಯಮಂತ್ರಿಗಳಿಗೆ ಘೇರಾವ್, ಶಾಸಕರುಗಳ ಮನೆ ಮುಂದೆ ಧರಣಿ, ಮೈಮೇಲೆ ಮಲ ಸುರಿದುಕೊಳ್ಳುವುದರ ಮುಖಾಂತರ ಹೋರಾಟ ನಡೆಸಿದರು.ಸಹ ರಾಜಕೀಯ ಪಕ್ಷಗಳು ರಾಜಕೀಯ ದೊಂಬರಾಟ ಮಾಡುತ್ತಾ ಬಂದಿದ್ದರು ಎಂದರು.

30 ವರ್ಷಗಳ ಕಾಲ ಒಳ ಮೀಸಲಾತಿ ಹೋರಾಟಕ್ಕೆ ಸುಪ್ರೀಂ ಕೋರ್ಟ್ ಸುಧೀರ್ಘವಾಗಿ ಚಿಂತನೆ ನಡೆಸಿ ಕಾನೂನು ಚೌಕಟ್ಟಿನೊಳಗೆ ಏನು ನ್ಯಾಯ ಒದಗಿಸಬೇಕಾಗಿದೆ ಎಂಬುದರ ಮೇಲೆ ಉತ್ತಮ ತೀರ್ಪನ್ನು ಪ್ರಕಟಿಸಿದೆ.. ಸುಪ್ರೀಂ ಕೋರ್ಟ್ ಸುಧೀರ್ಘ ಚಿಂತನೆ ನಡೆಸಿ ಈ ತೀರ್ಪನ್ನು ನೀಡಿದೆ.. ಇಂತಹ ಐತಿಹಾಸಿಕ ತೀರ್ಪನ್ನು ನೀಡಿರುವುದು ಸ್ವಾಗತಾರ್ಹ... ಈ ತೀರ್ಪು ದಲಿತರ ನೋವಿಗೆ ನಾಂದಿ ಹಾಡಿದೆ. ಆದರೆ ಅಂಬೇಡ್ಕರ್ ರವರು ಕೊಟ್ಟ ಸಂವಿಧಾನ ಯಾರಿಗೂ ಅನ್ಯಾಯ ಮಾಡಿಲ್ಲ ಎಂಬುದನ್ನು ಮತ್ತೆ ಸಾಬೀತು ಮಾಡಿದೆ.ನಮ್ಮ ಪೀಠದಿಂದ ಸುಪ್ರೀಂಕೋರ್ಟಿಗೆ ತುಂಬು ಹೃದಯದ ಧನ್ಯವಾದಗಳನ್ನು ಅರ್ಪಿಸುತ್ತೇವೆ.. ಎಲ್ಲರ ಪರಿಶ್ರಮದಿಂದ ಸುಪ್ರೀಂ ಕೋರ್ಟ್ ಒಳ್ಳೆಯ ತೀರ್ಪನ್ನು ನೀಡಿದೆ ಎಂದು ತಿಳಿಸಿದರು.

ಹನುಮಂತಪ್ಪ ದರ್ಗಾ ಮಾತನಾಡಿ, ಸುಪ್ರೀಂ ನ್ಯಾಯಾಲಯದ 7 ಜನರ ಸದಸ್ಯ ಪೀಠ ಉತ್ತಮವಾದ ತೀರ್ಪನ್ನು ನೀಡಿದೆ. ನಮ್ಮ ಸಮಾಜದಲ್ಲಿ ಬಡವರಿದ್ದಾರೆ ಅವರಿಗೆ ಇದರ ಉಪಯೋಗವಾಗಬೇಕಿದೆ. ಇದನ್ನು ಸರ್ಕಾರ ವಿಳಂಬ ಮಾಡದೆ ಜಾರಿ ಮಾಡಬೇಕಿದೆ ಎಂದು ಆಗ್ರಹಿಸಿದರು.

## ವಾರದಲ್ಲಿ ವೇದಾವತಿ ಸ್ಪರ್ಶಿಸಲಿರುವ ಎತ್ತಿನಹೊಳೆ ನೀರು

### ಪ್ರವಾಹವಾಗುವ ಸಾಧ್ಯತೆಯಿದೆ, ತಾಲ್ಲೂಕಿನ ಜನತೆ ಎಚ್ಚರಿಕೆಯಿಂದಿರಿ–ಗೋವಿಂದಪ್ಪ



» **ಹೊಸದುರ್ಗ**

ಭದ್ರಾ ನದಿ ನೀರು ಹಾಗೂ ಎತ್ತಿನಹೊಳೆ ನೀರು ಈ ಭಾಗದಲ್ಲಿ ಹರಿಯುವುದರಿಂದ ಮುಂದಿನ ದಿನಗಳಲ್ಲಿ ವೇದಾವತಿ ನೀರು ಹೆಚ್ಚಳವಾಗುವುದರಿಂದ ವೇದಾವತಿ ನದಿ ತೀರದಲ್ಲಿ ಪ್ರವಾಹ ವಾಗುವ ಸಾಧ್ಯತೆಯಿದ್ದು, ಸ್ಥಳೀಯರು ಹಾಗೂ ತಾಲೂಕಿನ ವಿವಿ ಸಾಗರ ಹಿನ್ನೀರು ಪ್ರದೇಶದ ಜನರು ಎಚ್ಚರಿಕೆಯಿಂದಿರಿ ಎಂದು ಶಾಸಕ ಬಿ.ಜಿ. ಗೋವಿಂದಪ್ಪ ಸಲಹೆ ನೀಡಿದರು.ತಾಲೂಕಿನ ಕೆಲ್ಲೋಡು ಸಮೀಪವಿರುವ ವೇದಾವತಿ ನದಿಗೆ ಶುಕ್ರವಾರ ಬಾಗಿಣ ಸಮರ್ಪಿಸಿ ಮಾತನಾಡಿದರು.ಕೆಲ್ಲೋಡಿನ ವೇದಾವತಿ ನದಿ ಭರ್ತಿಯಾಗಿ, ಚೆಕ್ ಡ್ಯಾಂ ಗಳಿಗಳು ತುಂಬುತ್ತಿವೆ. ಈ ನದಿ ಮೈದುಂಬಿ ಹರಿಯುತ್ತಿರುವುದರಿಂದ ತಾಲ್ಲೂಕಿನ ಜನತೆಗೆ ಕುಡಿಯುವ ನೀರಿನ ಸಮಸ್ಯೆ ಇಲ್ಲದಂತಾಗುತ್ತದೆ, ಅಂತರ್ಜಲ ಹೆಚ್ಚಾಗಿ ಸಾವಿರಾರು ರೈತರಿಗೆ ಅನುಕೂಲವಾಗುತ್ತದೆ. ವಾರದಲ್ಲಿ ಎತ್ತಿನಹೊಳೆ ನೀರು ಇಲ್ಲಿ ಹರಿಯುತ್ತದೆ ಎಂದ ಅವರು ಕಳೆದ ಒಂದು ವಾರದಿಂದಲೂ ಸಹಾ ಸತತ ಮಳೆಯಾಗಿದೆ ಎಂದರು.

ಈ ಸಂಧರ್ಬದಲ್ಲಿ ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಹೆಚ್.ಬಿ.ಮಂಜುನಾಥ್,ನಿಗಮ ಮಂಡಳಿ ಮಾಜಿ ಅಧ್ಯಕ್ಷ ಗೋ. ತಿಪ್ಪೇಶ್, ಅಗ್ರೋ ಹೆಚ್.ಶಿವಣ್ಣ,ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ.ಸಿಬ್ಬಂಧಿವರ್ಗ,ಡಾ:ಸ್ವಾತಿಪ್ರದೀಪ್ ಸೇರಿದಂತೆ ಪುರಸಭಾ ಸದಸ್ಯರುಗಳು ಜನಪ್ರತಿನಿಧಿಗಳು.ಕಾಂಗ್ರೆಸ್ ಮುಖಂಡರುಗಳು ಭಾಗವಹಿಸಿದ್ದರು.

# ವಿದ್ಯಾರ್ಥಿಗಳು ಯಾವುದೇ ರೋಗಕ್ಕೆ ತುತ್ತಾಗದಂತೆ ಜಾಗ್ರತೆ ವಹಿಸಲು ಆರೋಗ್ಯ ಇಲಾಖೆಯಿಂದ ಉಚಿತ ಚುಚ್ಚುಮದ್ದು : ಎಂ.ಬಿ.ನಾಗರಾಜು

» **ಚಳ್ಳಕೆರೆ**



ಪ್ರಾಥಮಿಕ ಶಾಲೆಯಲ್ಲಿ ಅಭ್ಯಾಸ ಮಾಡುವ ವಿದ್ಯಾರ್ಥಿಗಳು ಯಾವುದೇ ರೋಗಕ್ಕೆ ತುತ್ತಾಗದಂತೆ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕೆಂಬ ದೃಷ್ಠಿಯಿಂದ ಆರೋಗ್ಯ ಇಲಾಖೆ ಶಾಲೆಯ ಎಲ್ಲಾ ವಿದ್ಯಾರ್ಥಿಗಳಿಗೆ ಉಚಿತವಾಗಿ ಡಿಪಿಟಿ ಮತ್ತು ಟಿಡಿ ಚುಚ್ಚುಮದ್ದನ್ನು ನೀಡುವ ಮೂಲಕ ವಿದ್ಯಾರ್ಥಿಗಳ ಆರೋಗ್ಯದ ಬಗ್ಗೆ ಗಮನಹರಿಸುತ್ತಿರುವುದು ಸಂತಸ ತಂದಿದೆ ಎಂದು ಕಾಪರಹಳ್ಳಿ ಸರ್ಕಾರಿ ಹಿರಿಯಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಎಂ.ಬಿ.ನಾಗರಾಜು ತಿಳಿಸಿದರು.

ಅವರು, ಶುಕ್ರವಾರ ಆರೋಗ್ಯ ಇಲಾಖೆ ವತಿಯಿಂದ ಶಾಲೆಯ 1ನೇ ಮತ್ತು 4ನೇ ತರಗತಿ ಮಕ್ಕಳಿಗೆ ಲಸಿಕೆಯನ್ನು ಹಾಕುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ವಿದ್ಯಾರ್ಥಿಗಳು ಯಾವುದೇ ರೀತಿಯ ಆತಂಕವಿಲ್ಲದೆ ಲಸಿಕೆಯನ್ನು ಪಡೆಯಬಹುದಾಗಿದೆ.

ಆರೋಗ್ಯದ ಹಿತದೃಷ್ಠಿಯಿಂದ ಆರೋಗ್ಯ ಇಲಾಖೆ ಈ ಸೌಲಭ್ಯವನ್ನು ವಿದ್ಯಾರ್ಥಿಗಳಿಗೆ ನೀಡಿದ್ದು ಇದರ ಸದುಪಯೋಗ ಸದ್ವಿನಿಯೋಗವಾಗಲಿ ಎಂದರು.

## ಪ್ರಮುಖ ಸುದ್ದಿ

### ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕೊಡುಗೆ: ಯು.ಎಸ್.ವಿಷ್ಣುಮೂರ್ತಿರಾವ್

# 108 ವಿದ್ಯಾರ್ಥಿಗಳಿಗೆ 1.14 ಕೋಟಿ ಸುಜ್ಞಾನ ನಿಧಿ ಶಿಷ್ಯವೇತನ

» **ಚಳ್ಳಕೆರೆ**



ಕಳೆದ ಹಲವಾರು ದಶಕಗಳಿಂದ ಧಾರ್ಮಿಕ, ಸಾಮಾಜಿಕ ಕಾರ್ಯಕ್ರಮಗಳಲ್ಲಿ ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ತನ್ನದೇಯಾದ ನಿರಂತರ ಪ್ರಾಮಾಣಿಕ ಸೇವೆಯಿಂದ ಹಲವಾರು ಯೋಜನೆಗಳ ಮೂಲಕ ಜನರಿಗೆ ನೆರವಾಗುತ್ತಿದೆ ಎಂದು ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ, ಲೇಖಕ ಯು.ಎಸ್.ವಿಷ್ಣುಮೂರ್ತಿರಾವ್ ತಿಳಿಸಿದರು.

ಅವರು, ಶುಕ್ರವಾರ ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಆವರಣದಲ್ಲಿ ಸುಜ್ಞಾನ ನಿಧಿ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಇಡೀ ವರ್ಷ ಕ್ರಿಯಾಶೀಲ ಚಟುವಟಿಕೆಯಿಂದ ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಜನರನ್ನು ಸ್ಪಂದಿಸುತ್ತಿದೆ. ಪೂಜ್ಯ ಹೆಗ್ಗಡೆ ದಂಪತಿಗಳ ಮಾರ್ಗದರ್ಶನದಿಂದ ಈ ಸಂಸ್ಥೆ ಇಂದು ಸರ್ವರಿಗೂ ನೆರವು ನೀಡುವಲ್ಲಿ ಯಶಸ್ವಿಯಾಗಿದೆ. ವಿದ್ಯಾರ್ಥಿಗಳಿಗೂ ಸಹ ಸುಜ್ಞಾನ ನಿಧಿ ಯೋಜನೆಯಡಿ ಆರ್ಥಿಕ ನೆರವು ಕಲ್ಪಿಸಿ ವಿದ್ಯಾರ್ಥಿಗಳು ತಮ್ಮ ಸ್ವಾವಲಂಬನೆ ಬದುಕನ್ನು ರೂಪಿಸಿಕೊಳ್ಳಲು ಸಹಾಯಸ್ತ ನೀಡಿದೆ. ಆರ್ಥಿಕ ನೆರವು ಪಡೆದ ಎಲ್ಲರೂ ಇದನ್ನು ಸೂಕ್ತ ರೀತಿಯಲ್ಲಿ ಸದುಪಯೋಗಪಡಿಸಿಕೊಂಡು ಪ್ರಗತಿಯತ್ತ ಹೆಜ್ಜೆ ಹಾಕಬೇಕೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಜನಜಾಗೃತಿ ವೇದಿಕೆ ಹಾಗೂ ನಗರಸಭೆ ನಾಮನಿರ್ದೇಶನ ಸದಸ್ಯ ನೇತಾಜಿ ಪ್ರಸನ್ನ, ತಾಲ್ಲೂಕಿನ 108 ವಿದ್ಯಾರ್ಥಿಗಳಿಗೆ 1.14 ಕೋಟಿ ಶಿಷ್ಯ ವೇತನವನ್ನು ನೀಡಲಾಗಿದೆ. ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಸಂದರ್ಭದಲ್ಲಿ ಆರ್ಥಿಕ ನೆರವಿನಿಂದ ತೊಂದರೆಗೀಡಾಗಬಾರದು ಎಂಬ ಸದುದ್ದೇಶ ಇದರಲ್ಲಿ ಅಡಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲ್ಲೂಕು ಯೋಜನಾಧಿಕಾರಿ ಶಶಿಕಲಾ ಮಾತನಾಡಿ, ರಾಜ್ಯದಲ್ಲಿ ಇದುವರೆಗೂ 97 ಸಾವಿರ ವಿದ್ಯಾರ್ಥಿಗಳಿಗೆ 114 ಕೋಟಿ ಶಿಷ್ಯವೇತನವನ್ನು ತಾಂತ್ರಿಕ ಹಾಗೂ ವೃತ್ತಿಪರ ಶಿಕ್ಷಣಕ್ಕೆ ನೆರವು ನೀಡುತ್ತಾ ಬಂದಿದೆ. ಇದರಿಂದ ವಿದ್ಯಾರ್ಥಿಗಳು ಯಾವುದೇ ತೊಂದರೆಗೆ ಒಳಗಾಗದೆ ಶ್ರದ್ಧೆ, ವಿನಯದಿಂದ ತಮ್ಮ ವಿದ್ಯಾಭ್ಯಾಸವನ್ನು ಮುಂದುವರೆಸಬಹುದಾಗಿದೆ. ಮುಂದಿನ ದಿನಗಳಲ್ಲೂ ಸಹ ಈ ಯೋಜನೆ ಮುಂದುವರೆಯಲಿದೆ ಎಂದರು.

ಮದ್ಯವರ್ಜನ ಶಿಬಿರದ ಉಪಾಧ್ಯಕ್ಷರಾದ ಎಂ.ಎನ್.ಮೃತ್ಯುಂಜಯ, ನಗರಸಭಾ ನಾಮಿನಿ ಸದಸ್ಯ ಬಡಗಿಪಾಪಣ್ಣ, ಬಿ.ಎಂ.ಭಾಗ್ಯಮ್ಮ, ಐಟಿಐ ಕಾಲೇಜು ಪ್ರಾಂಶುಪಾಲ ರಮೇಶ್, ಭಾಗ್ಯಲಕ್ಷ್ಮಿ, ವಿಮಲ, ಸಂತೋಷ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.



# ಜಾಗತಿಕ ಕುಟುಂಬ ದಿನ-ಏಕತೆ ಮತ್ತು ಸಕಾರಾತ್ಮಕತೆಯ ಬೆಳಕು

ಹೊಸ ವರ್ಷವು ಹೊಸ ಹರ್ಷವನ್ನು ತರುವಂತೆ ಪ್ರಪಂಚದಾದ್ಯಂತ ಎಲ್ಲರೂ ಒಂದು ಕುಟುಂಬದ ರೀತಿಯಲ್ಲಿ ಹೊಸ ವರ್ಷಾಚರಣೆಯನ್ನು ಆಚರಿಸಲಾಗುತ್ತದೆ ಇದು ವರ್ಷದ ಆರಂಭದ ದಿನದಲ್ಲೇ ಏಕತೆ ಮತ್ತು ಸಕಾರಾತ್ಮಕತೆಯ ಹೊಸ ಬೆಳಕನ್ನು ಪ್ರಪಂಚಕ್ಕೆ ಚೆಲ್ಲುತ್ತದೆ. ಈ ದಿನವನ್ನು ಪ್ರತಿ ವರ್ಷ ಜಾಗತಿಕ ಕುಟುಂಬ ದಿನಾಚರಣೆಯನ್ನಾಗಿಯೂ ಆಚರಿಸಲಾಗುತ್ತದೆ. ಪ್ರಪಂಚದಲ್ಲಿ ಜನರ ಧರ್ಮಗಳು, ಸಂಸ್ಕೃತಿಗಳು, ಸಂಪ್ರದಾಯಗಳು ವಿಭಿನ್ನವಾಗಿರಬಹುದು ಆದರೆ ನಾವೆಲ್ಲರೂ ಒಂದೇ ಎಂಬ ಮನೋಭಾವನೆಯನ್ನು ಜಾಗತಿಕ ಕುಟುಂಬ ದಿನವು ಮೂಡಿಸುತ್ತದೆ. ಮಾನವ ಕುಲವು ಒಗ್ಗೂಡಿದರೆ ಮಾತ್ರ ಸಂತೋಷದ ಜೀವನವನ್ನು ಸಾಗಿಸಲು ಬದುಕುಳಿಯಬಹುದಾಗಿದೆ ಮತ್ತು ಯಶಸ್ವಿಯಾಗಬಹುದಾಗಿದೆ. ಏಕೆಂದರೆ, ಮಾನವನಲ್ಲಿ ಋಣಾತ್ಮಕ ಶಕ್ತಿಗಳು ಹೆಚ್ಚಿನದಾಗಿ ತನ್ನ ಪ್ರಭಾವ ಬೀರುವುದಲ್ಲದೆ ಯುದ್ಧ, ಸಾವು, ನೋವು, ಹಿಂಸೆಗಳಿಗೆ ಕಾರಣವಾಗುತ್ತದೆ. ಮಾನವನು ವಿದ್ಯಾವಂತನಾಗಿ ತಿಳಿವಳಿಕೆಯಿಂದ ಬೆಳೆದಂತೆ ಅವನ ಆಚಾರ-ವಿಚಾರ, ಆಲೋಚನೆ, ಮನೋಭಾವಗಳು ಬೆಳೆಯುತ್ತವೆ. ಹಾಗಾಗಿ ಶಿಕ್ಷಣದಿಂದ ಮಾತ್ರ ಮಾನವನಲ್ಲಿ ಏಕತೆ, ಸಮಾನತೆ, ಸಕಾರಾತ್ಮಕತೆ, ಮತ್ತು ಕುವೆಂಪು ಅವರ "ವಿಶ್ವ ಮಾನವ" ಸಂದೇಶವನ್ನು ವಿಶ್ವಕ್ಕೆ ಸಾರಬಹುದಾಗಿದೆ.

ವಿಶ್ವ ಶಾಂತಿ ದಿನ ಎಂದೂ ಕರೆಯಲ್ಪಡುವ ಜಾಗತಿಕ ಕುಟುಂಬ ದಿನವನ್ನು ವಿಶ್ವದಲ್ಲಿ ಸಾಮರಸ್ಯ ಮತ್ತು ಏಕತೆಯ ಪರಿಕಲ್ಪನೆಯನ್ನು ಉತ್ತೇಜಿಸಲು ಪ್ರತಿ ವರ್ಷ ಆಚರಿಸಲಾಗುತ್ತದ. ಇದಲ್ಲದೆ, ಪೌರತ್ವ ಗಡಿಗಳು ಅಥವಾ ಜನಾಂಗವನ್ನು ಲೆಕ್ಕಿಸದೆ ನಾವೆಲ್ಲರೂ ಕುಟುಂಬವಾಗಿರುವ ಜಾಗತಿಕ ಗ್ರಾಮವಾಗಿ ಪ್ರಪಂಚದ ಕಲ್ಪನೆಯನ್ನು ಇದು ಒತ್ತಿಹೇಳುತ್ತದೆ. 1997 ರಲ್ಲಿ ವಿಶ್ವ ಸಂಸ್ಥೆಯ ಸಾಮಾನ್ಯ ಸಭೆ ಪ್ರಪಂಚದ ಮಕ್ಕಳಿಗಾಗಿ ಶಾಂತಿ ಮತ್ತು ಅಹಿಂಸೆಯ ಸಂಸ್ಕೃತಿಗಾಗಿ ಅಂತರರಾಷ್ಟ್ರೀಯ ದಶಕವನ್ನು ಪ್ರಾರಂಭಿಸಿದಾಗಿ-ಹೊಸ ಸಹಸ್ರಮಾನದ ಮೊದಲ ದಿನದಂದು ಪ್ರಾರಂಭವಾಯಿತು. 1999 ರಲ್ಲಿ, ಎಲ್ಲಾ ವಿಶ್ವ ಸಂಸ್ಥೆ ಸದಸ್ಯ ರಾಷ್ಟ್ರಗಳು ಶಾಂತಿ ನಿರ್ಮಾಣದ ಕಡೆಗೆ ಕಾರ್ಯತಂತ್ರಗಳನ್ನು ಅಭಿವೃದ್ಧಿಪಡಿಸಲು ಆ ನಿರ್ದಿಷ್ಟ ವರ್ಷದ ಮೊದಲ ದಿನವನ್ನು ಔಪಚಾರಿಕವಾಗಿ ಮೀಸಲಿಡಲು ಆಹ್ವಾನವನ್ನು ಸ್ವೀಕರಿಸಿದವು. ದಿನದ ಸಕಾರಾತ್ಮಕ ಪರಿಣಾಮವನ್ನು ನೋಡಿ, ಜಾಗತಿಕ ಕುಟುಂಬ ದಿನವನ್ನು 2001 ರಲ್ಲಿ ವಿಶ್ವ ಸಂಸ್ಥೆಯು ವಾರ್ಷಿಕ ಕಾರ್ಯಕ್ರಮವೆಂದು ಘೋಷಿಸಿತು.

## ಜಾಗತಿಕ ಕುಟುಂಬ ದಿನ ಏಕೆ ಮುಖ್ಯವಾಗಿದೆ?

ಜಾಗತಿಕ ಕುಟುಂಬ ದಿನವು ಆಚರಿಸುವುದರಿಂದ ಸಮಾಜದಲ್ಲಿ ಏಕತೆ ಮತ್ತು ಸಮಾನತೆಯನ್ನು ದೇಶಗಳು ಸಾಧಿಸಬಹುದಾಗಿದೆ. ಇದನ್ನು ಆಚರಿಸುವುದು ಈ ಕೆಳಕಂಡ ಕಾರಣಗಳಿಂದ ಬಹಳ ಮುಖ್ಯವಾಗಿದೆ;

- ನಾವು ಒಂದು ದೊಡ್ಡ ಕುಟುಂಬ ಎಂದು ಇದು ನಮಗೆ ನೆನಪಿಸುತ್ತದೆ: ನಾವು ಪ್ರಪಂಚದ ಯಾವುದೇ ಭಾಗದಲ್ಲಿ ವಾಸಿಸುತ್ತಿರಲಿ, ವಾಸ್ತವವೆಂದರೆ, ನಾವೆಲ್ಲರೂ ಪ್ರೀತಿಯಿಂದ ತುಂಬಿದ ಹೃದಯಗಳನ್ನು ಹೊಂದಿರುವ ಮನಷ್ಯರು ಮತ್ತು ಇದು ಜಾಗತಿಕ ಕುಟುಂಬ ದಿನಗಳು ನಾವು ಹೇಗೆ ಸಂಪರ್ಕದಲ್ಲಿದ್ದೇವೆಎಂಬುದನ್ನು ನೆನಪಿಸುತ್ತದೆ.
- ತಾರತಮ್ಯವನ್ನು ಕೊನೆಗೊಳಿಸುವ ಕೆಲಸ ಮಾಡುತ್ತದೆ: ಜಾಗತಿಕ ಕುಟುಂಬ ದಿನವು ಅತ್ಯಗತ್ಯ ಏಕೆಂದರೆ ಇದು ಎಲ್ಲಾ ಜನಾಂಗಗಳು, ಧರ್ಮಗಳು ಮತ್ತು ದೇಶಗಳ ಜನರು ಒಂದೇ ಎಂದು ತೋರಿಸುತ್ತದೆ. ಪ್ರತಿ ವರ್ಷ ಇದನ್ನು ಆಚರಿಸುವ ಮೂಲಕ, ನಾವು ಯುವ ಪೀಳಿಗೆಯಲ್ಲಿ ಶಾಂತಿಯ ಸಂದೇಶವನ್ನು ಬೇರೂರಿಸುತ್ತೇವೆ.
- ವಿಶ್ವ ಸಮರ ಎಂದಿಗೂ ನಡೆಯುವುದಿಲ್ಲ ಎಂದು ಖಚಿತಪಡಿಸುತ್ತದೆ: ಯುವಜನತೆಯಲ್ಲಿ ಶಾಂತಿಯ ಸಂದೇಶವನ್ನು ನಿರಂತರವಾಗಿ ಸಾಧಿಸುವ ಮೂಲಕ, ಹಿಂದಿನ ತಪ್ಪುಗಳು ಎಂದಿಗೂ ಪುನರಾವರ್ತನೆಯಾಗದಂತೆ ನೋಡಿಕೊಳ್ಳಲು ಸಹಾಯಕವಾಗುತ್ತವೆ.

ಶಿಕ್ಷಣದಲ್ಲಿ ಜಾಗತಿಕ ಕುಟುಂಬ ಮತ್ತು ಶಾಲಾ ಸಂಬಂಧಗಳ ಪ್ರಾಮುಖ್ಯತೆ ಜಾಗತಿಕ ಕುಟುಂಬದ ಕುರಿತಾಗಿ ಕೆಲವು ಸಂಸ್ಥೆಗಳು ತಮ್ಮ ಅಭಿಪ್ರಾಯಗಳನ್ನು ಈ ಕೆಳಕಂಡಂತೆ ನೀಡಿವೆ;

## UNESCO:

- ವೈವಿಧ್ಯತೆ ಮತ್ತು ಸಾಂಸ್ಕೃತಿಕ ತಿಳುವಳಿಕೆಗೆ ಒತ್ತು: ಸಂಸ್ಕೃತಿಗಳು ಮತ್ತು ಸಮಾಜಗಳಲ್ಲಿ ಕುಟುಂಬಗಳು ಅಸಂಖ್ಯಾತ ರೂಪಗಳನ್ನು ತೆಗೆದುಕೊಳ್ಳುತ್ತವೆ ಎಂದು ಗಓಇಖಅಔ ಗುರುತಿಸುತ್ತದೆ. ಈ ವ್ಯತ್ಯಾಸಗಳನ್ನು ಶ್ಲಾಘಿಸಲು ಮತ್ತು ಅಂತರರಾಷ್ಟ್ರೀಯ ಸಂಸ್ಕೃತಿಯ ಸಂಭಾಷಣೆ ಮತ್ತು ತಿಳುವಳಿಕೆಯನ್ನು ಉತ್ತೇಜಿಸಲು ಅದು ಪ್ರತಿಪಾದಿಸುತ್ತದೆ. "ಫ್ಯಾಮಿಲೀಸ್‌ಆಫ್ ದಿ ವರ್ಲ್ಡ್" ಯೋಜನೆಯಂತಹ ಉಪಕ್ರಮಗಳು ಕುಟುಂಬದ ರಚನೆಗಳ ಶ್ರೀಮಂತಿಕೆ ಮತ್ತು ವೈವಿಧ್ಯತೆಯನ್ನು ಎತ್ತಿ ತೋರಿಸುವ ಗುರಿಯನ್ನು ಹೊಂದಿವೆ.
- ಶಿಕ್ಷಣ ಮತ್ತು ಕಲಿಕೆಯ ಮೇಲೆ ಕೇಂದ್ರೀಕರಿಸಿ: ಬಾಲ್ಯದ ಬೆಳವಣಿಗೆ ಮತ್ತು ಆಜೀವ ಕಲಿಕೆಯಲ್ಲಿ ಯುನೆಸ್ಕೋ ಕುಟುಂಬಗಳನ್ನು ಪ್ರಮುಖವೆಂದು ಪರಿಗಣಿಸುತ್ತದೆ. ಅವರು ಕುಟುಂಬ ಸಾಕ್ಷರತಾ ಕಾರ್ಯಕ್ರಮಗಳು, ಪೋಷಕ-ಮಕ್ಕಳ ಕಲಿಕೆಯ ಚಟುವಟಿಕೆಗಳು ಮತ್ತು ಶಿಕ್ಷಣದಲ್ಲಿ ಕುಟುಂಬಗಳ ಪಾತ್ರವನ್ನು ಬಲಪಡಿಸುವ ಉಪಕ್ರಮಗಳನ್ನು ಉತ್ತೇಜಿಸುತ್ತಾರೆ. ಅವರ "ಕುಟುಂಬ ಕಲಿಕೆಯೊಂದಿಗೆ ವಿನೋದ" ಮೈಕ್ರೋಲರ್ನಿಂಗ್ ಕೋರ್ಸ್ ಈ ಬದ್ಧತೆಯನ್ನು ಉದಾಹರಿಸುತ್ತದೆ.
- ಶಾಂತಿ ಮತ್ತು ಸುಸ್ಥಿರತೆಯ ಮೌಲ್ಯಗಳನ್ನು ಉತ್ತೇಜಿಸುವುದು: ಭವಿಷ್ಯದ ಪೀಳಿಗೆಯನ್ನು ರೂಪಿಸುವಲ್ಲಿ ಕುಟುಂಬಗಳು ವಹಿಸುವ ನಿರ್ಣಾಯಕ ಪಾತ್ರವನ್ನು ಗುರುತಿಸಿ, ಕುಟುಂಬಗಳಲ್ಲಿ ಶಾಂತಿ, ಸಹಿಷ್ಣುತೆ ಮತ್ತು ಸುಸ್ಥಿರ ಅಭಿವೃದ್ಧಿಯ ಮೌಲ್ಯಗಳನ್ನು ತುಂಬಲು ಗಓಇಖಅಔ ಕೆಲಸ ಮಾಡುತ್ತಿದೆ. ನೈತಿಕ ಶಿಕ್ಷಣ ಮತ್ತು ಜಾಗತಿಕ ಪೌರತ್ವದ ಕುರಿತು ಅವರ ಕೆಲಸವು ಈ ಅಂಶಕ್ಕೆ ಸಂಬಂಧಿಸಿದೆ.
- ದುರ್ಬಲ ಕುಟುಂಬಗಳನ್ನು ಬೆಂಬಲಿಸುವುದು: ಸಂಘರ್ಷ, ಬಡತನ ಅಥವಾ ತಾರತಮ್ಯದಿಂದಾಗಿ ಅಂಚಿನಲ್ಲಿರುವ ಮತ್ತು ಹಿಂದುಳಿದ ಕುಟುಂಬಗಳು ಎದುರಿಸುತ್ತಿರುವ ಸವಾಲುಗಳನ್ನು ಯುನೆಸ್ಕೋ ಅಂಗೀಕರಿಸುತ್ತದೆ. ಅವರು ಮಹಿಳೆಯರ ಮೇಲಿನ ದೌರ್ಜನ್ಯ, ನಿರಾಶ್ರಿತರ ಕುಟುಂಬಗಳು ಮತ್ತು ಹಿಂದುಳಿದ ಕುಟುಂಬಗಳಲ್ಲಿನ ಮಕ್ಕಳ ಶೈಕ್ಷಣಿಕ ಅಗತ್ಯಗಳಂತಹ ಸಮಸ್ಯೆಗಳನ್ನು ಪರಿಹರಿಸುವ ಯೋಜನೆಗಳಲ್ಲಿ ಕೆಲಸ ಮಾಡುತ್ತಿದೆ.

## ಅಂತರಾಷ್ಟ್ರೀಯ ಕಾರ್ಮಿಕರ ಸಂಘಟನೆ (ILO):

- ಜಾಗತಿಕ ಒಗ್ಗಟ್ಟು ಮತ್ತು ಪರಸ್ಪರ ಸಂಪರ್ಕ: ILO ಪ್ರಪಂಚದಾದ್ಯಂತದ ಎಲ್ಲಾ ಕಾರ್ಮಿಕರು, ರಾಷ್ಟ್ರೀಯತೆಯನ್ನು ಲೆಕ್ಕಿಸದೆ, ಯೋಗ್ಯವಾದ ಕೆಲಸ ಮತ್ತುಅವರ ಹಕ್ಕುಗಳ ರಕ್ಷಣೆಗೆ ಅರ್ಹರು ಎಂಬ ಕಲ್ಪನೆಯನ್ನು ಉತ್ತೇಜಿಸುತ್ತದೆ. ಇದು ಜಾಗತಿಕ ಕುಟುಂಬದ ಕಲ್ಪನೆಯೊಂದಿಗೆ ಹೊಂದಿಕೆಯಾಗುತ್ತದೆ, ಅಲ್ಲಿ ಎಲ್ಲರೂ ಸಂಪರ್ಕ ಹೊಂದಿದ್ದಾರೆ ಮತ್ತು ಅವರ ಯೋಗ ಕ್ಷೇಮವು ಮುಖ್ಯವಾಗಿದೆ.
- ಸಮಾನತೆ ಮತ್ತು ತಾರತಮ್ಯ:ಲಿಂಗ, ಜನಾಂಗ ಅಥವಾ ಕುಟುಂಬದ ಸ್ಥಿತಿಯಂತಹ ಅಂಶಗಳ ಆಧಾರದ ಮೇಲೆ ಕೆಲಸದ ಸ್ಥಳದಲ್ಲಿ ತಾರತಮ್ಯದ ವಿರುದ್ಧ ಖಐಔ ಸಕ್ರಿಯವಾಗಿ ಹೋರಾಡುತ್ತದೆ. ಇದು ಜಾಗತಿಕ ಕುಟುಂಬದ ತತ್ವದೊಂದಿಗೆ ಹೊಂದಿಕೆಯಾಗುತ್ತದೆ, ಅಲ್ಲಿ ಪ್ರತಿಯೊಬ್ಬರನ್ನು ಸಮಾನವಾಗಿ ಪರಿಗಣಿಸಲಾಗುತ್ತದೆ ಮತ್ತು ಅವರ ಕೊಡುಗೆಗಳಿಗಾಗಿ ಮೌಲ್ಯಯುತವಾಗಿದೆ.
- ಸಾಮಾಜಿಕ ರಕ್ಷಣೆ ಮತ್ತು ಹಂಚಿಕೆಯ ಜವಾಬ್ದಾರಿ: ಖಐಔ ಸಾಮಾಜಿಕ ಭದ್ರತಾ ವ್ಯಾಪ್ತಿಯನ್ನು ವಿಸ್ತರಿಸಲು ಮತ್ತು ಎಲ್ಲಾ ಕಾರ್ಮಿಕರಿಗೆ ಆರೋಗ್ಯ ಮತ್ತು ಇತರ ಅಗತ್ಯ ಸೇವೆಗಳಿಗೆ ಪ್ರವೇಶವನ್ನು ಖಚಿತಪಡಿಸಿಕೊಳ್ಳಲು ಕೆಲಸ ಮಾಡುತ್ತದೆ. ಇದು ಜಾಗತಿಕ ಕುಟುಂಬದ ಕಲ್ಪನೆಯನ್ನು ಪ್ರತಿಬಿಂಬಿಸುತ್ತದೆ, ಅಲ್ಲಿ ಸದಸ್ಯರು ಪರಸ್ಪರ ಕಾಳಜಿ ವಹಿಸುವ ಜವಾಬ್ದಾರಿಯನ್ನು ಹಂಚಿಕೊಳ್ಳುತ್ತಾರೆ ಮತ್ತು ಪ್ರತಿಯೊಬ್ಬರೂ ಮೂಲಭೂತ ಮಟ್ಟದ ಯೋಗಕ್ಷೇಮವನ್ನು ಹೊಂದಿದ್ದಾರೆ ಎಂದು ಖಚಿತಪಡಿಸಿಕೊಳ್ಳುತ್ತಾರೆ.

ಜಾಗತಿಕ ಕುಟುಂಬ ಪರಿಕಲ್ಪನೆ ಆಧಾರಿತ ಭೂಮಿಯ ಮೇಲಿರುವ ಎಲ್ಲರೂ ಒಂದೆ ಎಂಬ ಭಾವನೆಯನ್ನು ವಿದ್ಯಾರ್ಥಿಗಳಲ್ಲಿ ಬೆಳೆಸಲು ಕೆಲವು ಸಲಹೆಗಳನ್ನು ಶಿಕ್ಷಕರಿಗೆ ನೀಡಲಾಗಿದೆ;

- ಶಿಕ್ಷಕರು ತರಗತಿಗಳಲ್ಲಿ ಬೋಧಿಸುವಾಗ ವಿದ್ಯಾರ್ಥಿಗಳು ಪ್ರಪಂಚ ಒಂದು ಕುಟುಂಬವಿದ್ದಂತೆ ಎಂದು ಗಮನದಲ್ಲಿಟ್ಟುಕೊಂಡು ವಿದ್ಯಾರ್ಥಿಯು ಅದರ ಅಗತ್ಯತೆಗಳನ್ನು ಅರ್ಥಮಾಡಿಕೊಂಡು ಪೂರೈಸಲು ಶ್ರಮಿಸಬೇಕು ಎಂದು ಹೇಳುವುದು.
- ಸಮಾಜವೆಂಬ ದೊಡ್ಡ ಕುಟುಂಬದೊಂದಿಗೆ ಎಲ್ಲಾ ಸಂದರ್ಭದಲ್ಲೂ ಒಟ್ಟಾಗಿ ಕೆಲಸ ಮಾಡಲು ಪ್ರೇರಕವಾಗಬೇಕೆಂದು ತಿಳಿಸುವುದು.
- ಕುಟುಂಬ, ಶಾಲೆ ಮತ್ತು ವಿದ್ಯಾರ್ಥಿಗಳ ನಡುವೆ ಸುಮದಾಯದ ಪ್ರಜ್ಞೆಯನ್ನು ಬೆಳೆಸುವುದು.
- ವಿದ್ಯಾರ್ಥಿಗಳ ಪರಸ್ಪರ ತಿಳುವಳಿಕೆಯು ವಿದ್ಯಾರ್ಥಿಗಳ ಶೈಕ್ಷಣಿಕ ಅನ್ವೇಷಣೆಗಳಲ್ಲಿ ಯಶಸ್ವಿಯಾಗುವ ಸಾಮರ್ಥ್ಯವನ್ನು ಬೆಳೆಸುವುದು.
- ವಿದ್ಯಾರ್ಥಿಗಳಿಗೆ ಸಾಮಾಜಿಕ, ಶೈಕ್ಷಣಿಕ, ಮಾನಸಿಕ, ಬೌದ್ಧಿಕ ವೈಯಕ್ತಿಕ ಮತ್ತು ಭಾವನಾತ್ಮಕವಾಗಿ ಪ್ರಪಂಚದೊಂದಿಗೆ ಹೊಂದಾಣಿಕೆಯನ್ನು ಮಾಡಿಕೊಳ್ಳವಂತೆ ಮಾಡುವುದು.
- ವಿದ್ಯಾರ್ಥಿಗಳಿಗೆ ಶಾಲೆಯ ಒಳಗೆ ಮತ್ತು ಹೊರಗೆ ಯಶಸ್ಸಿಯಾಗಲು ಕುಟುಂಬದೊಂದಿಗೆ ಬೆರೆಯಲು ಉತ್ತಮವಾದ ಅವಕಾಶಗಳನ್ನು ಕಲ್ಪಿಸಿಕೊಡುವುದು.
- ವಿದ್ಯಾರ್ಥಿಗಳ ವರ್ತನೆಗಳು ಮತ್ತು ನಡುವಳಿಕೆಗಳು ಪ್ರಪಂಚದೊಂದಿಗೆ ಆರೋಗ್ಯಕರವಾಗಿರಬೇಕೆಂದು ಜಾಗೃತಿ ಮೂಡಿಸುವುದು.
- ಕ್ಲಿಷ್ಟಕರ ಸಂದರ್ಭದಲ್ಲಿ ಆತ್ಮವಿಶ್ವಾಸ ಮತ್ತು ಸ್ಥಿತಿಸ್ಥಾಪಕತ್ವವನ್ನು ಬೆಳೆಸುವುದು.
- ಶಾಲೆಗಳಲ್ಲಿ ವಿಶ್ವಾಸದ ವಾತಾವರಣವನ್ನು ಬೆಳೆಸುವುದು ಮತ್ತು ವಿದ್ಯಾರ್ಥಿಗಳು ಶಾಲೆಯಲ್ಲಿ ಯಶಸ್ಸನ್ನು ಸಾಧಿಸಲು ಸಹಾಯ ಮಾಡುವುದು.
- ಸಮುದಾಯದ ಮತ್ತು ಸಮಾಜದ ಸಭೆಗಳಲ್ಲಿ ಭಾಗವಹಿಸಲು ವಿದ್ಯಾರ್ಥಿಗಳನ್ನು ಪ್ರೇರೇಪಿಸುವುದು.
- ವಿದ್ಯಾರ್ಥಿಗಳು ಶೈಕ್ಷಣಿಕ ಗುರಿಗಳೊಂದಿಗೆ ಪ್ರಪಂಚವೆಂಬ ಕುಟುಂಬದ ಗುರಿಗಳನ್ನು ಸಾಧಿಸಲು ಧನಾತ್ಮಕ ಗುಣಗಳನ್ನು ಉತ್ತೇಜಿಸುವುದು.
- ಪ್ರಪಂಚದಾದ್ಯಂತ ಶಾಂತಿ, ನೆಮ್ಮದಿ, ಸಾಮರಸ್ಯ ಹಾಗೆ ಯುದ್ಧ, ಹಿಂಸಾತ್ಮಕತೆ, ಭಯೋತ್ಪಾದನೆಯ ಕುರಿತು ಜಾಗೃತಿಯನ್ನು ಮೂಡಿಸುವುದು.
- ಹವಾಮಾನ ಬದಲಾವಣೆ, ಬಡತನ ಮತ್ತು ಮಾನವ ಹಕ್ಕುಗಳಂತಹ ಸಮಸ್ಯೆಗಳನ್ನು ಚರ್ಚಿಸಿ, ಪರಿಹಾರಕ್ಕಾಗಿ ಸಹಯೋಗ ಮತ್ತು ಸಾಮೂಹಿಕ ಕ್ರಿಯೆಯು ಹೇಗೆ ಅಗತ್ಯಎಂಬುದನ್ನು ತಿಳಿಸುವುದು.
- ವಿಭಿನ್ನ ಸಂಸ್ಕೃತಿಗಳು ಅಥವಾ ದೇಶಗಳ ಬಗ್ಗೆ ಹಾನಿಕಾರಕ ಪೂರ್ವಗ್ರಹದ ಕಲ್ಪನೆಗಳನ್ನು ಚರ್ಚಿಸಿ, ವಿಮರ್ಶಾತ್ಮಕವಾಗಿ ಯೋಚಿಸಲು ಮತ್ತುತಮ್ಮದೇಆದ ತಿಳುವಳಿಕೆಯುಳ್ಳ ಅಭಿಪ್ರಾಯಗಳನ್ನು ರೂಪಿಸಲು ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವುದು.
- ನೀರು, ವಿದ್ಯುತ್ ಮತ್ತು ಇತರ ಸಂಪನ್ಮೂಲಗಳನ್ನು ಸಮರ್ಥವಾಗಿ ಬಳಸಿ ಪರಿಸರವನ್ನು ರಕ್ಷಿಸುವುದು ಮತ್ತು ಅಂತರಾಷ್ಟ್ರೀಯ ಸುಸ್ಥಿರತೆಗೆ ಕೊಡುಗೆ ನೀಡುವುದು.
- ಮುಖ್ಯ ವಿಷಯವೆಂದರೆ ಚಿಂತನಶೀಲ, ಪೂರ್ವಭಾವಿ ಮತ್ತು ನಿಮ್ಮ ಸಮುದಾಯ ಮತ್ತು ನಿಮ್ಮ ಸುತ್ತಲಿನ ಪ್ರಪಂಚದೊಂದಿಗೆ ತೊಡಗಿಸಿಕೊಳ್ಳಲು ಸಿದ್ಧರಿರುವುದು.

ಒಟ್ಟಾರೆಯಾಗಿ, ಕೇವಲ ವೈಯಕ್ತಿಕ ಹೊಸ ವರ್ಷದ ನಿರ್ಣಯಗಳನ್ನು ಮಾಡುವ ಬದಲು, ಕುಟುಂಬವಾಗಿ ನಿರ್ಣಯಗಳನ್ನು ಮಾಡುವ ಅವಕಾಶಗಳನ್ನು ಶಿಕ್ಷಕರು ಮಾಡಿಕೊಡಬೇಕಾಗಿದೆ. ಅದರೊಂದಿಗೆ ಹೆಚ್ಚು ಹೆಚ್ಚು ಜಾಗೃತಿ ಕಾರ್ಯಕ್ರಮಗಳನ್ನು ರೂಪಿಸಬೇಕು. ಜಾಗತಿಕ ಕುಟುಂಬದ ಗುರಿ ಮತ್ತು ಉದ್ದೇಶಗಳನ್ನು ಸಾಕಾರಗೊಳಿಸುವಲ್ಲಿ ಪೂರಕವಾದರೆ ಜಗತ್ತನ್ನು ಹೆಚ್ಚು ಶಾಂತಿಯು ಸ್ಥಳವನ್ನಾಗಿ ಮಾಡಬೇಕಾಗಿದೆ



ಡಾ. ಜಗನ್ನಾಥ
ಕೆ. ಡಾಂಗೆ, ಶಿಕ್ಷಣ
ಪ್ರಾಧ್ಯಾಪಕರು
ಕುವೆಂಪು
ವಿಶ್ವವಿದ್ಯಾಲಯ.



ಡಾ. ಭವ್ಯಾ.
ಆರ್. ಪೋಸ್ಟ್ ಡಾಕ್ಟರಲ್
ಸಂಶೋಧನಾರ್ಥಿ

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T